ಸಂಪುಟ : 10 ಸಂಚಿಕೆ: 73 ಪುಟ : 4+2 ಬೆಲೆ: 3.00 ಶನಿವಾರ ಎಪ್ರಿಲ್ 19 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 73 Pages : 4+2 Price : 3.00 Saturday April 19 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಗದಗ ತಾಲೂಕು 5ನೇ ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ ಅಭಿಮತ

# ಕುರ್ತಕೋಟಿ ಸಾಂಸ್ಕೃತಿಕ ಚಟುವಟಿಕೆಗಳ ತವರೂರು

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ನಾಡಿನ ಹಲವಾರು ಸಾಹಿತಿ ಸತ್ಪುರುಷರನ್ನು ಪ್ರೋತ್ಸಾಹಿಸಿದ ಹಿರಿಮೆ ಕುರ್ತಕೋಟಿ ಗ್ರಾಮಕ್ಕೆ ಸಲ್ಲುತ್ತದೆ ಎಂದು ಕಾನೂನು, ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೆಮ್ಮೆ ವ್ಯಕ್ತಪಡಿಸಿದರು.

ಗದಗ ತಾಲೂಕಿನ ಕುರ್ತಕೋಟಿಯ ಸಂತೆ ಮಾರುಕಟ್ಟೆ ಪ್ರಾಂಗಣದಲ್ಲಿ ಜರುಗಿದ ಗದಗ ತಾಲೂಕಾ 5ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಕುರ್ತಕೋಟಿಯು ನಾಟಕ, ಬಯಲಾಟ, ರಂಗಭೂಮಿ, ಸಂಗೀತ, ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರಸಿದ್ಧವಾಗಿದೆ. ಭಾರತ ರತ್ನ ಭೀಮಸೇನ ಜೋಶಿ ಅವರ ಪ್ರಥಮ ಗುರುಗಳೂ ಕುರ್ತಕೋಟಿಯುವರು. ಈ ಗ್ರಾಮವು ಐತಿಹಾಸಿಕ ಶಿಲ್ಪಕಲೆ, ವಾಸ್ತುಶಿಲ್ಪದಂತಹ ಕಟ್ಟಡಗಳಿಂದ ಖ್ಯಾತವಾಗಿದೆ. ಕುರ್ತಕೋಟಿ ಗ್ರಾಮದ ಕನ್ನಡದ ಕೀರ್ತಿ ಎಂದೇ ಪ್ರಖ್ಯಾತರಾದ ಕೀರ್ತಿನಾಥ ಕುರ್ತಕೋಟಿ ಅವರು ಖ್ಯಾತ ಸಾಹಿತಿ ಹಾಗೂ ವಿಮರ್ಶಕರಾಗಿದ್ದರು. ಕುಮಾರವ್ಯಾಸ ಹಾಗೂ ದ.ರಾ. ಬೇಂದ್ರೆ ಸಾಹಿತ್ಯದಲ್ಲಿ ಅಧಿಕಾರಯುತವಾಗಿ ಮಾತನಾಡಿ ಪ್ರಖ್ಯಾತ ವಾಗ್ಮಿಯೂ ಆಗಿದ್ದರು ಎಂದರು.

ಹೊಸಳ್ಳಿಯ ಸಂಸ್ಥಾನಮಠದ ಅಭಿನವ ಶ್ರೀ ಬೂದಿಶ್ವರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು.

ಇದೇ ಸಂದರ್ಭದಲ್ಲಿ ಗದಗ ತಾಲೂಕು 5ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸ್ಮರಣ ಸಂಚಿಕೆ ಬಿಡುಗಡೆಗೊಳಿಸಲಾಯಿತು.




ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕದ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ, ಗದಗ ಜಿಲ್ಲೆಯನ್ನು ಕನ್ನಡ ನಾಡಿನ ಸಾಂಸ್ಕೃತಿಕ ರಾಜಧಾನಿ ಎಂದರೆ ತಪ್ಪಾಗಲಾರದು. ಜಿಲ್ಲೆಯಲ್ಲಿನ ಗ್ರಾಮಗಳು ಸಾಹಿತ್ಯ, ನಾಟಕ, ಕಲೆ ಕ್ಷೇತ್ರಗಳಲ್ಲಿ ಉತ್ತಮ ಪರಿಸರವನ್ನು ಹೊಂದಿದೆ ಎಂದರು.

> ಕುರ್ತಕೋಟಿ ಗ್ರಾಮವು ಸಾಹಿತ್ಯ, ಸಂಸ್ಕೃತಿ, ಸಂಗೀತ, ರಾಜಕೀಯ, ಕಲಾಕ್ಷೇತ್ರದಲ್ಲಿ ತನ್ನದೇ ಆದ ಛಾಪು ಮೂಡಿಸಿದೆ. ಕುರ್ತಕೋಟಿಯ ಡಾ. ಅರುಣ ಪಾಟೀಲ ಅವರು ಶ್ರೇಷ್ಠ ಸಂಶೋಧಕರು, ವಿಜ್ಞಾನಿಗಳಾಗಿದ್ದಾರೆ. ರಸಾಯನ ಶಾಸ್ತ್ರದಲ್ಲಿ ಪಿ.ಎಚ್.ಡಿ. ಪದವಿ ಪಡೆದಿದ್ದು, ಜಿಲ್ಲೆಯಲ್ಲಿ ಮೋಡ ಬಿತ್ತನೆ ಪ್ರಯೋಗಕ್ಕೆ ಕಾರಣೀಭೂತರಾಗಿದ್ದಾರೆ. ಕನ್ನಡ ನಾಡಿನ ಸೇವೆಗಾಗಿ ಗದಗ ಜಿಲ್ಲೆಯ ಕೊಡುಗೆ ಅಪಾರವಾಗಿದೆ. ಕನ್ನಡ ನಾಡಿಗೆ ಕರ್ನಾಟಕ ಎಂದು ನಾಮಕರಣ ಮಾಡಲು ಗದಗ ಜಿಲ್ಲೆಯ ಪಾತ್ರ ಮಹತ್ವದ್ದಾಗಿದೆ. ಈ ಕನ್ನಡ ಸಾಹಿತ್ಯ ಸಮ್ಮೇಳನವು ಮಾದರಿ ಸಮ್ಮೇಳನವಾಗಲಿ.
>
> **– ಡಾ. ಎಚ್.ಕೆ. ಪಾಟೀಲ.**
> ಜಿಲ್ಲಾ ಉಸ್ತುವಾರಿ ಸಚಿವರು.

ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಮಹೇಶ ಜೋಶಿ ಮಾತನಾಡಿ, ಕನ್ನಡ ಬದ್ಧತೆ ಹಾಗೂ ಪರಿಪೂರ್ಣತೆ ಹೊಂದಿದ ಭಾಷೆಯಾಗಿದೆ. ಕನ್ನಡ ಭಾಷೆಯನ್ನು ಲಿಪಿಗಳ ರಾಣಿ ಎಂದು ಹೆಸರಿಸಲಾಗಿದೆ. ಕನ್ನಡ ನಾಡು ಹೆಸರಾಂತ ಕವಿಗಳು, ನಾಟಕಕಾರರು, ಸಾಹಿತಿಗಳು, ಗಮಕಿಗಳನ್ನು ಹೊಂದಿದೆ. ಕುರ್ತಕೋಟಿ ಗ್ರಾಮವು ಸ್ನೇಹ–ಸೌಹಾರ್ದತೆಗೆ, ಸಹನೆ–ತಾಳ್ಮೆಗೆ ಹೆಸರಾಗಿದೆ. ಕನ್ನಡದ ದೀಪ ಚಿರಕಾಲ ಬೆಳಗಲಿ ಎಂದು ಹಾರೈಸಿದರು.

ಖ್ಯಾತ ಸಾಹಿತಿ ಜಗನ್ನಾಥ ಜಮಾದಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಗದಗ ಜಿಲ್ಲೆಯು ಸಾಹಿತ್ಯ, ಸಂಗೀತ, ಕಲೆ, ಕ್ರೀಡೆ, ಚಿತ್ರಕಲೆ, ಶಿಲ್ಪಕಲೆ, ರಂಗಭೂಮಿ, ಜಾನಪದ ಕ್ಷೇತ್ರಗಳಿಗೆ ವಿಶಿಷ್ಟ ಕೊಡುಗೆಯನ್ನು ನೀಡಿದ್ದು, ಈ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಸಾಹಿತ್ಯ ಪರಂಪರೆಯ ಪ್ರವಾಹವೇ ಹರಿದು ಬಂದಿದೆ ಎಂದು ಅಭಿಪ್ರಾಯಪಟ್ಟರು.

ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಘಟಕದ ಅಧ್ಯಕ್ಷೆ ಡಾ. ರಶ್ಮಿ ಅಂಗಡಿ ಸರ್ವರನ್ನು ಸ್ವಾಗತಿಸಿದರು.

ಕರಿಯಪ್ಪ ಕೊಡವಳ್ಳಿ, ಶಹನಾಜ್ ಕಟ್ಟಿಮನಿ ಕಾರ್ಯಕ್ರಮ ನಿರೂಪಿಸಿದರು. ಎಂ.ಎ. ಇನಾಮತಿ ಪ್ರೌಢಶಾಲೆಯ ವಿದ್ಯಾರ್ಥಿಗಳು ನಾಡಗೀತೆ ಪ್ರಸ್ತುತಪಡಿಸಿದರು. ಮಂಜುಳಾ ವೆಂಕಟೇಶಯ್ಯ ವಂದಿಸಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಮಾಜಿ ಶಾಸಕ ಡಿ.ಆರ್. ಪಾಟೀಲ, ಗದಗ ತಾಲೂಕು ಗ್ಯಾರಂಟಿ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಶಿವಶರಣೆ ಡಾ. ನೀಲಮ್ಮ ತಾಯಿ, ಅನ್ನದಾನಿ ಹಿರೇಮಠ, ಎಪಿಎಂಸಿ ಸದಸ್ಯರಾದ ಅಪ್ಪಣ್ಣ ಇನಾಮತಿ, ಗಿರೀಶ ಡಬಾಲಿ, ವಿರುಪಣ್ಣ ಹೊಸಮನಿ, ಚಂದ್ರಶೇಖರಪ್ಪ ಚೂರಿ, ಶರಣೆ ರತ್ನಕ್ಕ ಪಾಟೀಲ, ಡಾ. ಶಿವಪ್ಪ ಕುರಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್. ಎಸ್. ಬುರುಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ಗುರಣ್ಣ ಬಳಗಾನೂರ, ಅರ್ಜುನ ಗೋಳಸಂಗಿ, ಸಾಹಿತಿಗಳು, ಹಿರಿಯರು, ಗಣ್ಯರು ಪ್ರೊ. ಕೆ.ಎಚ್. ಬೇಲೂರ, ಉಪಸ್ಥಿತರಿದ್ದರು.

## ಯುವ ರೆಡ್ ಕ್ರಾಸ್ ಕಾರ್ಯಾಗಾರ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಗದ್ಗುರು ತೋಂಟದಾರ್ಯ ಮಹಾವಿದ್ಯಾಲಯ, ಗದಗ ಯುವ ರೆಡ್ ಕ್ರಾಸ್ ಘಟಕ ಹಾಗೂ ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ, ಯುವ ರೆಡ್ ಕ್ರಾಸ್ ಘಟಕ ಇವರುಗಳ ಆಶ್ರಯದಲ್ಲಿ ವಾಯ್.ಆರ್.ಸಿ. ಕಾರ್ಯಕ್ರಮ ಅಧಿಕಾರಿಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಎಪ್ರಿಲ್ 19ರ ಮುಂಜಾನೆ 9.30ಕ್ಕೆ ಜ. ತೋಂಟದಾರ್ಯ ಮಹಾವಿದ್ಯಾಲಯ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ವಿ.ಪ ಸದಸ್ಯ ಎಸ್.ವ್ಹಿ ಸಂಕನೂರ ನೆರವೇರಿಸುವರು. ವಿಶೇಷ ಆಹ್ವಾನಿತರಾಗಿ ಕರ್ನಾಟಕ ವಿಶ್ವವಿದ್ಯಾಲಯದ ಪ್ರಭಾರಿ ಉಪಕುಲಪತಿ ಪ್ರೊ. ಜಯಶ್ರೀ ಎಸ್, ಕುಲಸಚಿವ ಡಾ. ಎ. ಚನ್ನಪ್ಪ ಆಗಮಿಸುವರು. ಅಧ್ಯಕ್ಷತೆಯನ್ನು ಜೆ.ಟಿ. ಮಹಾವಿದ್ಯಾಲಯದ ಸ್ಥಾನಿಕ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಎಸ್.ಪಿ. ಸಂಶಿಮಠ ವಹಿಸುವರು. ಮುಖ್ಯ ಅತಿಥಿಗಳಾಗಿ ಇಂಡಿಯನ್ ರೆಡ್ ಕ್ರಾಸ್ ಸೊಸಾಯಿಟಿ ಗದಗ ಅಧ್ಯಕ್ಷ ಡಾ. ಆರ್.ಎನ್. ಗೊಡಬೋಲೆ, ಕಾಲೇಜಿನ ಪ್ರಾಚಾರ್ಯ ಪಿ.ಜಿ. ಪಾಟೀಲ ಉಪಸ್ಥಿತರಿರುವರು. ಇಂಡಿಯನ್ ರೆಡ್ ಕ್ರಾಸ್ ಸೊಸೈಟಿ ಕಾರ್ಯದರ್ಶಿ ಡಾ. ಎಮ್.ಡಿ. ಸಾಮುದ್ರಿ ಹಾಗೂ ಐ.ಎಮ್.ಎ. ಬ್ಲಡ್ ಬ್ಯಾಂಕ್‌ನ ಆರೋಗ್ಯ ಅಧಿಕಾರಿ ಡಾ. ರಾಜಶೇಖರ ಪವಾಡಶೆಟ್ಟರ ಉಪನ್ಯಾಸ ನೀಡುವರು ಎಂದು ಸಮನ್ವಯಾಧಿಕಾರಿ ಡಾ. ಎಸ್.ಜಿ. ಚಲವಾದಿ ಮತ್ತು ಸಲಹಾ ಸಮಿತಿ ಸದಸ್ಯ ಮಾರ್ತಾಂಡಪ್ಪ ಕತ್ತಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಾಲೆಗಳ ಆರಂಭಕ್ಕೂ ಮುನ್ನವೇ ಶೌಚಾಲಯಗಳನ್ನು ದುರಸ್ತಿಗೊಳಿಸಲು ಸಚಿವ ಎಚ್.ಕೆ. ಪಾಟೀಲ ಸೂಚನೆ

# ಶಾಲಾ ಶೌಚಾಲಯಗಳ ಗುಣಮಟ್ಟ ಉತ್ತಮವಾಗಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿರುವ ಶೌಚಾಲಯಗಳು ಬಳಕೆಗೆ ಯೋಗ್ಯವಾಗಿರಬೇಕು. ಸಣ್ಣಪುಟ್ಟ ದುರಸ್ತಿ ಅಗತ್ಯವಿದ್ದಲ್ಲಿ ಶಾಲೆ ಆರಂಭವಾಗುವುದಕ್ಕೂ ಮೊದಲು ದುರಸ್ತಿಗೊಳಿಸಲು ಸೂಕ್ತ ಕ್ರಮ ವಹಿಸಬೇಕೆಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ಗದಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ಶುಕ್ರವಾರ ಜಿಲ್ಲೆಯ ಶಾಲಾ ಶೌಚಾಲಯಗಳ ಕುರಿತು ಜರುಗಿದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಸಚಿವರು ಮಾತನಾಡಿದರು.

ಶಾಲಾ ಶೌಚಾಲಯಗಳ ನಿರ್ವಹಣೆಗಾಗಿ ಶಿಕ್ಷಣ ಇಲಾಖೆಯಿಂದ ಅನುದಾನ ನೀಡಲಾಗುತ್ತದೆಯಲ್ಲದೆ, ಎಸ್.ಡಿ.ಎಂ.ಸಿಗಳ ಅನುದಾನ ಬಳಕೆ ಮಾಡಿಕೊಂಡು ಶಾಲಾ ಶೌಚಾಲಯಗಳು ಬಳಕೆಗೆ ಯೋಗ್ಯವಾಗಿರುವಂತೆ ನೋಡಿಕೊಳ್ಳಬೇಕು ಎಂದರಲ್ಲದೆ, ಶೌಚಾಲಯಗಳನ್ನು 10–15 ಸಾವಿರ ಒಳಗಡೆ ದುರಸ್ತಿಗೊಳಿಸಿ ಸುಸ್ಥಿತಿಯಲ್ಲಿಟ್ಟುಕೊಳ್ಳುವಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚಿಸಿದರು. ಹೆಚ್ಚುವರಿಯಾಗಿ ಅಗತ್ಯವಿರುವ ಶೌಚಾಲಯಗಳ ಕುರಿತು ಕ್ರಮ ವಹಿಸಲಾಗುವುದು. ಹೆಚ್ಚುವರಿ ಶೌಚಾಲಯ ನಿರ್ಮಿಸಲು ಮಾಡೆಲ್ ಪ್ಲಾನಿಂಗ್ ಶೀಘ್ರವೇ ಸಿದ್ಧಗೊಳಿಸಿ ಮಂಡಿಸಬೇಕು. ಶಾಲಾ ಶಿಕ್ಷಕರಿಗೆ ಬಯೋಮೆಟ್ರಿಕ್ ವ್ಯವಸ್ಥೆ ಕಡ್ಡಾಯಗೊಳಿಸುವ ಮೂಲಕ ಎಲ್ಲರೂ ಸರಿಯಾದ ಸಮಯಕ್ಕೆ ಶಾಲೆಗೆ ಹಾಜರಾಗಿ ಶಿಕ್ಷಣದ ಗುಣಮಟ್ಟ ಸುಧಾರಿಸಬೇಕು. ಶಾಲೆಗಳ ಆವರಣದಲ್ಲಿ ಸಿಸಿಟಿವಿ ಅಳವಡಿಕೆ ಮಾಡುವ ಕುರಿತಂತೆ ಸಚಿವರು ಚರ್ಚಿಸಿದರು. ಶಿಕ್ಷಕರ ಹಾಜರಾತಿ ಕುರಿತಂತೆ ಪ್ರತ್ಯೇಕ ಮೊಬೈಲ್ ಆ್ಯಪ್ ಅಭಿವೃದ್ಧಿಪಡಿಸುವ ಮೂಲಕ ಹಾಜರಾತಿ ಸರಿಯಾದ ಸಮಯಕ್ಕೆ ಆಗುವಂತೆ ಕ್ರಮ ಆಗಬೇಕಿದೆ. ಈ ಬಗ್ಗೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಗಮನ ಹರಿಸುವಂತೆ ತಿಳಿಸಿದರು.



> ಜಿಲ್ಲೆಯ ಎಲ್ಲ ಶಾಲೆಗಳಲ್ಲಿ ಮಕ್ಕಳು ಶುದ್ಧ ನೀರು ಕುಡಿಯುವಂತಾಗಬೇಕು. ಈ ಕುರಿತು ಶುದ್ಧ ನೀರಿನ ಘಟಕ ಸ್ಥಾಪನೆಗೆ ಅಗತ್ಯವಿರುವ ಕ್ರಮವಹಿಸಲು ಸೂಚಿಸಿದ ಸಚಿವರು, ಈಗಾಗಲೇ ಓದಿನ ಮನೆ ಯೋಜನೆ ಜಾರಿಯಲ್ಲಿದ್ದು, ಅದನ್ನು ಇನ್ನಷ್ಟು ಪರಿಣಾಮಕಾರಿಯಾಗಿ ನಿರ್ವಹಿಸುವಂತೆ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸಚಿವ ಡಾ. ಎಚ್.ಕೆ. ಪಾಟೀಲ ನಿರ್ದೇಶನ ನೀಡಿದರು.

ಸಭೆಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ, ಡಾ. ಎನ್. ಎಚ್. ನಾಗನೂರ, ಸಿದ್ದು ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಡಯಟ್ ಪ್ರಾಚಾರ್ಯ ಜಿಎಲ್ ಬಾರಾಟಕ್ಕೆ ಸೇರಿದಂತೆ ಜಿಲ್ಲೆಯ ಎಲ್ಲ ತಾಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಜರಿದ್ದರು.

# ಜೋಡಿ ರಥೋತ್ಸವ ಸಂಪನ್ನ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಬಾಲೆ ಹೊಸೂರಿನ ಶ್ರೀ ದಿಂಗಾಲೇಶ್ವರಮಠ ಮತ್ತು ಗ್ರಾಮದ ಆಂಜನೇಯ ಸ್ವಾಮಿ ದೇವಸ್ಥಾನದ ಜಾತ್ರಾ ಮಹೋತ್ಸವದ ಅಂಗವಾಗಿ ಶುಕ್ರವವಾರ ಗೋಧೂಳಿ ಸಮಯದಲ್ಲಿ ಅಪಾರ ಭಕ್ತ ಸಮೂಹದ ನಡುವೆ ಅದ್ದೂರಿ ಜೋಡಿ ರಥೋತ್ಸವಗಳು ನೆರವೇರಿದವು.

ಜಾತ್ರಾ ಮಹೋತ್ಸವದ ಅಂಗವಾಗಿ ಗ್ರಾಮದಲ್ಲಿ ಬೆಳಗಿನಿಂದಲೇ ಮಹಿಳೆಯರು, ಮಕ್ಕಳು ಹೊಸ ಉಡುಗೆ ತೊಟ್ಟು ತಂಡೋಪತಂಡವಾಗಿ ದಿಂಗಾಲೇಶ್ವರ ಮಠ ಮತ್ತು ಉತ್ತರಾಭಿಮುಖ ಆಂಜನೇಯ ದೇವಸ್ಥಾನಕ್ಕೆ ಆಗಮಿಸಿ, ರಥ–ಕ್ಕೆ ಉಡಿ ತುಂಬಿ, ಹೊಸ ವಸ್ತ್ರಾಭರಣಗಳನ್ನಿರಿಸಿ ಶೃದ್ಧಾ ಭಕ್ತಿಯಿಂದ ಪೂಜೆ ಸಲ್ಲಿಸಿದರು. ಸಂಜೆ ಶ್ರೀ ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ಸಕಲ ವಾದ್ಯ ವೈಭವಗಳೊಂದಿಗೆ ರಥೋತ್ಸವ ನೆರವೇರಿತು.

ಸೇರಿದ್ದ ಅಪಾರ ಭಕ್ತ ಸಮೂಹ ಭಕ್ತಿ–ಭಾವಗಳಿಂದ ಉತ್ತತ್ತಿ, ಹಣ್ಣುಗಳನ್ನು ತೇ–ರಿಗೆ ಎಸೆದರು. ಆಂಜನೇಯ ಸ್ವಾಮಿ ದೇವಸ್ಥಾನ ಮತ್ತು ದಿಂಗಾಲೇಶ್ವರ ಮಠದ ರಥೋತ್ಸವ ಏಕ ಕಾಲಕ್ಕೆ ಪ್ರಾರಂಭವಾಗಿ ಗ್ರಾಮದ ಮುಖ್ಯ ಸ್ಥಳದಲ್ಲಿ ರಥಗಳು ಸೇರಿದ ಸಂದರ್ಭದಲ್ಲಿ ಭಕ್ತರ ಘೋಷಣೆಗಳು ಮುಗಿಲು ಮುಟ್ಟಿತ್ತು. ಶ್ರೀಮಠದಲ್ಲಿ ಪ್ರಾತಃಕಾಲ ಶ್ರೀ ಗುರು ದಿಂಗಾಲೇಶ್ವರರ ಕರ್ತೃ ಗದ್ದುಗೆಗೆ ಮಹಾರುದ್ರಾಭಿಷೇಕ, ಷಟಸ್ಥಲ ಧ್ವಜಾರೋಹಣ ಕಾರ್ಯಕ್ರಮ ನೆರವೇರಿತು. ಎಪ್ರಿಲ್ 22ರ ಸಂಜೆ 5ಕ್ಕೆ ಶ್ರೀ ಫಕೀರ ದಿಂಗಾಲೇಶ್ವರ ಜಗ್ಗುರುಗಳು ಕಡುಬಿನ ಕಾಳಗವನ್ನು ನೇರವೇರಿಸುವರು.



## ಸಾಕ್ಷಿ ಸುಭಾಷಿತ

ನನಗೆ ಜೈಕಾರ ಮಾಡುವ ಬದಲಾಗಿ, ನಾನು ತೋರಿಸಿಕೊಟ್ಟ ದಾರಿಯಲ್ಲಿ ಸಾಗಿರಿ'
– ಡಾ. ಬಿ.ಆರ್. ಅಂಬೇಡ್ಕರ್

## ಸಂಪಾದಕೀಯ

# ಸರಕಾರ ಮತ್ತೊಮ್ಮೆ ಜಾತಿ ಜನಗಣತಿ ನಡೆಸಲು ನಿರ್ಧರಿಸಲಿ

ರಾಜ್ಯದಲ್ಲಿ ಜಾತಿ ಜನಗಣತಿ ವಿಷಯ ತಾರಕಕ್ಕೆ ಏರುತ್ತಿದೆ. ಪ್ರತಿಪಕ್ಷಗಳು ಮಾತ್ರವಲ್ಲದೆ ಆಡಳಿತ ಪಕ್ಷದ ಸದಸ್ಯರು ಆಕ್ಷೇಪವನ್ನು ವ್ಯಕ್ತಪಡಿಸಿ ಎಚ್ಚರಿಕೆ ನೀಡುವ ಕೆಲಸವನ್ನು ಮಾಡುತ್ತಿದ್ದಾರೆ. ವಿಶೇಷವಾಗಿ ಒಕ್ಕಲಿಗ ಸಮುದಾಯಕ್ಕೆ ಸೇರಿದ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಗೂ ಸತೀಶ್ ಜಾರಕಿಹೊಳಿ, ಜಾತಿ ಜನಗಣತಿ ವರದಿ ಜಾರಿಯಿಂದ ಸರ್ಕಾರಕ್ಕೆ ಸಂಕಷ್ಟ ಎದುರಾಗಲಿದೆ ಎಂದು ಬಹಿರಂಗವಾಗಿಯೇ ಹೇಳಿದ್ದಾರೆ.

ಅಷ್ಟಕ್ಕು ಸಿದ್ದರಾಮಯ್ಯ ನೇಮಿಸಿದ ಕಾಂತರಾಜು ಆಯೋಗ, ಜಾತಿಗಳ ಜನಸಂಖ್ಯೆಗಿಂತ ಆಯಾ ಜಾತಿಗಳ ಆರ್ಥಿಕ ಮತ್ತು ಸಾಮಾಜಿಕ ಪರಿಸ್ಥಿತಿಯನ್ನ ಅವಲೋಕಿಸಿ ವರದಿಯನ್ನ ನೀಡಿದೆ. ಆದರೆ ರಾಜ್ಯದಲ್ಲಿ ಜಾತಿ ಜನಗಣತಿ ಎನ್ನುವ ಲೇಪನ ಅಂಟಿಕೊಂಡಿದೆ. ಕಾಂಗ್ರೆಸ್ಸಿನ ಯಾವೊಬ್ಬ ನಾಯಕರು ಸಹ ಜಾತಿಗಳ ಅಂಕಿ ಸಂಖ್ಯೆಗಿಂತ ಆಯಾ ಜಾತಿಗಳ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿಯ ಬಗ್ಗೆ ಮನವರಿಕೆ ಮಾಡಿಕೊಡುವ ಕೆಲಸ ಮಾಡುತ್ತಿಲ್ಲ.

ರಾಜ್ಯ ಸರ್ಕಾರಕ್ಕೂ ಸಮೀಕ್ಷೆಯ ನೈಜ ಉದ್ದೇಶವನ್ನು ಜನರ ಮುಂದಿಡುವ ಇಚ್ಛೆ ಇಲ್ಲ. ಪ್ರತಿಪಕ್ಷಗಳು ಸಹ ಕೇವಲ ಟೀಕೆ ಮಾಡುವುದಕ್ಕಾಗಿ ಆಯೋಗದ ವರದಿಯನ್ನು ವಿರೋಧಿಸುತ್ತಿದೆ. ವಾಸ್ತವದಲ್ಲಿ ಆಯೋಗದ ವರದಿ ಜಾತಿವಾರು ಜನಸಂಖ್ಯೆ ಹೊರತಾಗಿ ಮತ್ತೇನು ಅಂಶಗಳನ್ನು ಒಳಗೊಂಡಿದೆ ಎನ್ನುವ ಬಗ್ಗೆ ಬೆಳಕು ಚೆಲುವ ಕೆಲಸ ಮಾಡಿಲ್ಲ. ಅಂತಹ ಅಧ್ಯಯನಶೀಲ ಜನಪ್ರತಿನಿಧಿಗಳು ಪ್ರತಿಪಕ್ಷದಲ್ಲಿ ಸದ್ಯಕ್ಕೆ ಯಾರು ಕಾಣುತ್ತಿಲ್ಲ.

ಸದ್ಯಕ್ಕೆ ಈ ಗೊಂದಲ ನಿವಾರಣೆ ಆಗಬೇಕಾದರೆ, ರಾಜ್ಯ ಸರ್ಕಾರ ಮತ್ತೊಮ್ಮೆ ಜಾತಿವಾರು ಜನಗಣತಿಯನ್ನು ಮಾಡಲಿ. ಆ ಮೂಲಕ ರಾಜ್ಯದ ಜನಸಂಖ್ಯೆಯ ಮಾಹಿತಿಯೂ ಲಭ್ಯವಾಗಲಿದೆ. ಈ ಬಾರಿ ಪಾರದರ್ಶಕವಾಗಿ ಜಾತಿ ಜನಗಣತಿಯನ್ನು ಪ್ರತಿಯೊಬ್ಬರ ಮನೆ ಮನೆಗೆ ಹೋಗಿ ಮಾಡಿದಲ್ಲಿ ಈಗಿನ ಸಮಸ್ಯೆ ಮತ್ತೊಮ್ಮೆ ಉದ್ಭವಿಸುವುದಿಲ್ಲ.

### ಬೇಡ್ತಿ ನದಿಯ ಏತ ನೀರಾವರಿ ಯೋಜನೆ ಎರಡನೇ ಹಂತಕ್ಕೆ 180 ಕೋಟಿ ಬಿಡುಗಡೆ

# ಕ್ಷೇತ್ರದ ಅನ್ನದಾತರಿಗೆ ಬಂಪರ್ ಕೊಡುಗೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಬೇಡ್ತಿ ನದಿಯ ಏತ ನೀರಾವರಿ ಯೋಜನೆ ಎರಡನೇ ಹಂತದಲ್ಲಿ 107 ಕೆರೆಗಳನ್ನು ತುಂಬಿಸಲು ರಾಜ್ಯ ಸರ್ಕಾರದ ರೂ. 180 ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದೆ.



ಈಗಾಗಲೇ ಸುಮಾರು ರೂ. 60 ಕೋಟಿ ವೆಚ್ಚದ 40 ಕೆರೆಗಳನ್ನು ತುಂಬುವ ಕಾರ್ಯ ಸಂತೋಷ್ ಲಾಡ್ ಅವರ ಅವಿರತ ಪ್ರಯತ್ನದಿಂದ ಪೂರ್ಣಗೊಂಡಿದ್ದು, ಇದೀಗ ಎರಡನೇ ಹಂತಕ್ಕೆ ಸರ್ಕಾರ ಹಣ ನೀಡಿದೆ. ಬಹು ನಿರೀಕ್ಷಿತ ಯೋಜನೆಗೆ ಸರ್ಕಾರ ಸ್ಪಂದಿಸಿರುವುದಕ್ಕೆ ಅನ್ನದಾತರು ಖುಷಿಗೊಂಡಿದ್ದು, ರಾಜ್ಯ ಸರ್ಕಾರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ್ ಲಾಡ್ ಅವರಿಗೆ ಧನ್ಯವಾದ ತಿಳಿಸಿದ್ದಾರೆ.

ಕಲಘಟಗಿ ತಾಲೂಕಿನ ಮಹತ್ವಾಕಾಂಕ್ಷಿ ಬೇಡ್ತಿ ನದಿಯ ಏತ ನೀರಾವರಿ ಯೋಜನೆಯ ಎರಡನೇ ಹಂತದ 107 ಕೆರೆಗಳನ್ನು ತುಂಬುವ ಪ್ರಸ್ತಾವಕ್ಕೆ ರಾಜ್ಯ ಸರ್ಕಾರದಿಂದ ಅನುಮೋದನೆ ಕೊಡಿಸಲು ಸಚಿವ ಲಾಡ್ ಸಾಕಷ್ಟು ಶ್ರಮಿಸಿದ್ದರು. ಲಘಟಗಿ-ಅಳ್ನಾವರ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ ಸಂತೋಷ್ ಲಾಡ್ ತಾಲೂಕಿನ ಅನ್ನದಾತರಿಗೆ ಕೊಟ್ಟ ಮಾತನ್ನು ಮತ್ತೊಮ್ಮೆ ಉಳಿಸಿಕೊಂಡಿದ್ದಾರೆ.

ಸಿಎಂ, ಡಿಸಿಎಂಗೆ ಧನ್ಯವಾದ ತಿಳಿಸಿದ ಲಾಡ್: ಬಹು ನಿರೀಕ್ಷಿತ ಯೋಜನೆಯ ಸಾಕಾರಕ್ಕೆ ಸಹಕಾರ ನೀಡುತ್ತಿರುವ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರಿಗೆ, ಉಪ ಮುಖ್ಯಮಂತ್ರಿಗಳು ಹಾಗೂ ಬೃಹತ್ ನೀರಾವರಿ ಸಚಿವರಾದ ಡಿ.ಕೆ. ಶಿವಕುಮಾರ್ ಅವರಿಗೆ ಸಚಿವ ಲಾಡ್ ಧನ್ಯವಾದ ತಿಳಿಸಿದ್ದಾರೆ.

ಸಚಿವರಿಗೆ ಅನ್ನದಾತರಿಂದ ಕೃತಜ್ಞತೆ: ಸಚಿವ ಲಾಡ್ ಅವರ ಅವಿರತ ಶ್ರಮದಿಂದ ಈ ಕಾರ್ಯ ಸಾಕಾರವಾಗಿದ್ದು, ಅಸಂಖ್ಯಾತ ರೈತ ಕುಟುಂಬಗಳಿಗೆ ಅನುಕೂಲವಾಗಲಿದೆ. ಕಲಘಟಗಿಯಂತಹ ನೀರಿನ ಕೊರತೆಯ ತಾಲೂಕಿಗೆ ಇಂತಹ ಯೋಜನೆ ಅವಶ್ಯವಿತ್ತು. ಇದೀಗ ರಾಜ್ಯ ಸರ್ಕಾರ ನಮ್ಮ ಬೇಡಿಕೆಗೆ ಸ್ಪಂದಿಸಿದೆ. ಆಧುನಿಕ ಭಗೀರಥನಂತೆ ಸಚಿವ ಲಾಡ್ ನಮಗಾಗಿ ದುಡಿದಿದ್ದಾರೆ ಎಂದು ಕಲಘಟಗಿಯ ರೈತರು ಖುಷಿ ವ್ಯಕ್ತಪಡಿಸಿದ್ದಾರೆ.

ಧಾರವಾಡ ಜಿಲ್ಲೆಯ ಗ್ರಾಮೀಣ ಹಾಗೂ ನಗರ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಶುಕ್ರವಾರ ವಿಕಾಸಸೌಧದಲ್ಲಿ ಉನ್ನತ ಮಟ್ಟದ ಸಭೆ ನಡೆಸಿದರು.

ಕುಡಿಯುವ ನೀರಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಕ್ರಮವನ್ನು ಅನುಸರಿಸಬೇಕು. ನೀರು ಪೂರೈಸಲು ವಿದ್ಯುತ್ ಸೇರಿದಂತೆ ಎಲ್ಲಾ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನವಲಗುಂದ ಕ್ಷೇತ್ರದ ಶಾಸಕ ಎನ್.ಹೆಚ್. ಕೋನರೆಡ್ಡಿ ಮಾತನಾಡಿ, ಕರೆಂಟ್‌ನಲ್ಲಿ ಸೋಲಾರ್ ಸಿಸ್ಟಮ್‌ನ್ನು ಅಳವಡಿಸಿಕೊಂಡರೆ ಒಳ್ಳೆಯದು. ವಿದ್ಯುತ್ ಮತ್ತು ಸೋಲಾರ್ ಎರಡರ ಬಳಕೆಯಿಂದ ಕರೆಂಟ್‌ನ ಅಭಾವವನ್ನು ತಪ್ಪಿಸಬಹುದು ಹಾಗೂ ಇದನ್ನು ಆದಷ್ಟು ಬೇಗನೆ ಕಾರ್ಯರೂಪಕ್ಕೆ ತರಲು ಹೇಳಿದರು.

# ಜೀವನದ ಪಯಣದ ಸುತ್ತ 'ಕಾವೇರಿ ತೀರದಲ್ಲಿ...

ಮನುಷ್ಯನ ಜೀವನ ಅನ್ನೋದು ಒಂದು ಸಮುದ್ರದ ತೀರದಂತೆ. ಅದು ಕೆಲವೊಮ್ಮೆ ಪ್ರಶಾಂತವಾಗಿ ಸಾಗುತ್ತಿದ್ದರೆ, ಮತ್ತೆ ಕೆಲವೊಮ್ಮೆ ಭೋರ್ಗರೆಯುವ ಅಲೆಗಳಿಂದ ಬದುಕನ್ನು ಎದುರಿಸಬೇಕಾಗುತ್ತದೆ. ಯಾವಾಗ ಪ್ರಶಾಂತವಾಗಿ ಸಾಗುತ್ತದೆ, ಯಾವಾಗ ತನ್ನ ದಿಕ್ಕನ್ನು ವಿರುದ್ಧವಾಗಿ ಬದಲಿಸಿಕೊಂಡುಬಿಡುತ್ತೆ ಅನ್ನೋದನ್ನು ಯಾರಿಂದಲೂ ಸಹ ಊಹಿಸಲು ಸಾಧ್ಯವಾಗುವುದಿಲ್ಲ ಎಂಬ ಎಳೆಯನ್ನಿಟ್ಟುಕೊಂಡು 'ಕಾವೇರಿ ತೀರದಲ್ಲಿ ಮುಂಗಾರಿದೆ' ಎಂಬ ಚಿತ್ರವನ್ನು ಆರ್.ಕೆ. ಗಾಂಧಿ ಅವರು ನಿರ್ದೇಶಿಸುತ್ತಿದ್ದಾರೆ.



ಈಗಾಗಲೇ ತೆಲುಗಿನ ರುದ್ರಾಕ್ಷ ಪುರಂ, ಪ್ರೇಮ ಭಿಕ್ಷ ಹಾಗು ಕನ್ನಡದಲ್ಲಿ ಬಿಡುಗಡೆಗೆ ಸಿದ್ಧವಾಗಿರುವ 'ಮುಗಿಲ ಮಲ್ಲಿಗೆ' ಚಿತ್ರಗಳನ್ನು ನಿರ್ದೇಶಿಸಿರುವ ಆರ್.ಕೆ. ಗಾಂಧಿ 'ಕಾವೇರಿ ತೀರದಲ್ಲಿ...' ಚಿತ್ರಕ್ಕೆ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ಆಕ್ಷನ್ ಕಟ್ ಹೇಳುತ್ತಿದ್ದಾರೆ.


ಬಾಗಲಕೋಟೆ ಜಿಲ್ಲೆಯ ತೇರದಾಳ ಮೂಲದ ಉದಯ್ ನಾಯಕನಾಗಿ ಹಾಗೂ ಕನ್ನಡದಲ್ಲಿ ಮಗಳೇ, ಅಸುರರು ಚಿತ್ರಗಳಲ್ಲಿ ನಟಿಸಿದ್ದ ಸುಪ್ರಿತಾ ರಾಜ್ ಈ ಚಿತ್ರದಲ್ಲಿ ನಾಯಕಿಯಾಗಿ ನಟಿಸುತ್ತಿದ್ದಾರೆ. ಸ್ನೇಹಾಲಯಂ ಕ್ರಿಯೇಷನ್ಸ್ ಲಾಂಛನದಲ್ಲಿ ನವೀನ್ ಕುಮಾರ್ ಗೌಡ, ಗೋಪಾಲ್ ಸ್ವಾಮಿ ಹಾಗೂ ವಸಂತ ನಾಯಕ್ ಆವರುಗಳು ಈ ಚಿತ್ರಕ್ಕೆ ಬಂಡವಾಳವನ್ನು ಹೂಡುತ್ತಿದ್ದಾರೆ.

ಚಿತ್ರದ ಪ್ರಮುಖ ತಾರಾಗಣದಲ್ಲಿ ಉದಯ್, ಸುಪ್ರಿತಾ ರಾಜ್, ಮಮತ, ಹೊಸಪೇಟೆ ರಾಘವೇಂದ್ರ, ಆಂಜಿನಪ್ಪ, ಅನ್ನಪೂರ್ಣ, ಸಿದ್ದಯ್ಯ ಎಸ್.ಹೀರೇಮಠ್, ಶೋಭರಾಜ್, ಪುಷ್ಪಾಗೌಡ ಮುಂತಾದವರಿದ್ದು, ಉಳಿದ ತಾರಾಗಣದ ಆಯ್ಕೆ ನಡೆಯುತ್ತಿದೆ.

ಗಂಧರ್ವ ರಾಯ್ ರಾವುತರ ಸಾಹಿತ್ಯ ಸಂಗೀತ, ನಾಗೇಂದ್ರ ಕುಮಾರ್ ಎಂ ಅವರ ಛಾಯಾಗ್ರಹಣ, ಮೋಹನ್ ಕುಮಾರ್ ಪ್ರಸಾಧನ, ವಿನಯ್ ಜಿ.ಆಲೂರು ಸಂಕಲನ, ವಿ.ಎಂ. ಎಸ್. ಗೋಪಿ ಪತ್ರಿಕಾ ಸಂಪರ್ಕ, ಮಲ್ಲಿಕಾರ್ಜುನ ಅವರ ಕಲಾ ನಿರ್ದೇಶನ ಈ ಚಿತ್ರಕ್ಕಿದೆ. ಎಪ್ರಿಲ್ 25ರಿಂದ ಆರಂಭಿಸಿ ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಹೊಸಪೇಟೆ, ಬಾಗಲಕೋಟೆ ಹಾಗೂ ಬಿಜಾಪುರ ಜಿಲ್ಲೆಯ ಸುತ್ತಮುತ್ತ ಚಿತ್ರದ ಚಿತ್ರೀಕರಣ ನಡೆಸಲು ಚಿತ್ರ ತಂಡ ಯೋಜನೆ ಹಾಕಿಕೊಂಡಿದೆ.

– ವಿ.ಎಂ.ಎಸ್. ಗೋಪಿ.
ಬೆಂಗಳೂರು.

# ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ: ಸುಗ್ರೀವಾಜ್ಞೆ ಹೊರಡಿಸಿದ ಆಂಧ್ರ ಸರ್ಕಾರ



■ ವಿಜಯಸಾಕ್ಷಿ ಸುದ್ದಿ, ಆಂಧ್ರ ಪ್ರದೇಶ

ರಾಜ್ಯದಲ್ಲಿ ಶಿಕ್ಷಣ ಮತ್ತು ಉದ್ಯೋಗ ನೇಮಕಾತಿಯಲ್ಲಿ ಪರಿಶಿಷ್ಟ ಜಾತಿಯವರನ್ನು (ಎಸ್‌ಸಿ) ಮೂರು ಉಪ ವರ್ಗಗಳಾಗಿ ವರ್ಗೀಕರಿಸಿ ಒಳ ಮೀಸಲಾತಿ ನೀಡಲು ಆಂಧ್ರ ಪ್ರದೇಶ ಸರ್ಕಾರ ಗುರುವಾರ (ಏ.17) ಸುಗ್ರಿವಾಜ್ಞೆ ಹೊರಡಿಸಿದೆ.

ಸಮುದಾಯದೊಳಗಿನ ಅಸಮಾನತೆಗಳು ಮತ್ತು ಸರ್ಕಾರಿ ಯೋಜನೆಗಳ ಪ್ರವೇಶವನ್ನು ನಿಭಾಯಿಸಲು ಪರಿಶಿಷ್ಟ ಜಾತಿಗಳನ್ನು ಮೂರು ಉಪ-ವರ್ಗಗಳಾಗಿ ವರ್ಗೀಕರಿಸಲು ಈ ಸುಗ್ರೀವಾಜ್ಞೆಯು ಒಂದು ಚೌಕಟ್ಟನ್ನು ಒದಗಿಸುತ್ತದೆ.

'ಆಂಧ್ರ ಪ್ರದೇಶ ಪರಿಶಿಷ್ಟ ಜಾತಿ (ಉಪ-ವರ್ಗೀಕರಣ) ಸುಗ್ರೀವಾಜ್ಞೆ-2025 ಅನ್ನು ರಾಜ್ಯದ ಗೆಜೆಟ್‌ನಲ್ಲಿ ಇಂಗ್ಲಿಷ್, ತೆಲುಗು ಮತ್ತು ಉರ್ದು ಭಾಷೆಗಳಲ್ಲಿ ಆಂಧ್ರ ಪ್ರದೇಶ ಸುಗ್ರೀವಾಜ್ಞೆ 2025ರ ನಂ. 2 ಎಂದು ಪ್ರಕಟಿಸಲಾಗಿದೆ' ಎಂದು ಕಾನೂನು ಇಲಾಖೆಯ ಆದೇಶದಲ್ಲಿ ತಿಳಿಸಿದೆ.

ಸುಗ್ರೀವಾಜ್ಞೆಯ ಪ್ರಕಾರ, ಚಂಡಾಲ, ಪಾಕಿ, ರೆಲ್ಲಿ ಮತ್ತು ಡೋಮ್ ಸಮುದಾಯಗಳು ಸೇರಿದಂತೆ ಹನ್ನೆರಡು ಉಪ-ಜಾತಿಗಳನ್ನು ವರ್ಗ 1ರಲ್ಲಿ (ಅತ್ಯಂತ ಹಿಂದುಳಿದ) ಇರಿಸಲಾಗಿದೆ. ಈ ವರ್ಗ ಶೇ. 1ರಷ್ಟು ಮೀಸಲಾತಿ ಪಡೆಯಲಿದೆ.

ವರ್ಗ 2ರಲ್ಲಿ ಚಾಮರ್, ಮಾದಿಗ, ಸಿಂಧೋಲ ಮತ್ತು ಮಾತಂಗಿಯಂತಹ 18 ಉಪಜಾತಿಗಳಿದ್ದು, ಶೇ. 6.5 ರಷ್ಟು ಮೀಸಲಾತಿ ಕಲ್ಪಿಸಲಾಗಿದೆ.

# ಬಸವರಾಜ ಗುಡ್ಲಾನೂರರಿಗೆ ಅಭಿನಂದನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿರುವ ತಿಮ್ಮಾಪೂರ ಗ್ರಾಮದ ಬಸವರಾಜ ಗುಡ್ಲಾನೂರ 2024-25ನೇ ಸಾಲಿನ ಮುಖ್ಯಮಂತ್ರಿ ಚಿನ್ನದ ಪದಕ ಪಡೆದಿರುವ ನಿಮಿತ್ತ ಮಾರುತೇಶ್ವರ ಜಾತ್ರಾ ಮಹೋತ್ಸವದ ನಾಟಕ ಉದ್ಘಾಟನಾ ಸಮಾರಂಭದಲ್ಲಿ ಗ್ರಾಮಸ್ಥರು, ಸ್ನೇಹಿತರು ನಾಟಕ ಸಂಘದ ಮಾಲಕರು ಸನ್ಮಾನಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಬಸವರಾಜ ಗುಡ್ಲಾನೂರ ಮಾತನಾಡಿ, ಉತ್ತಮ ಕೆಲಸವನ್ನು ಮಾಡಿದರೆ ಪ್ರಶಸ್ತಿಗಳು ನಮ್ಮನ್ನು ಹುಡುಕಿಕೊಂಡು ಬರುತ್ತವೆ. ಸರಕಾರದ ಕೆಲಸ ದೇವರ ಕೆಲಸ ಎಂದು ಪ್ರಾಮಾಣಿಕತೆಯಿಂದ ನಾವು ಯಾವುದೇ ಇಲಾಖೆಯಲ್ಲಿ ನಿಷ್ಠೆಯಿಂದ ಕೆಲಸ ಮಾಡಬೇಕು. ಈ ಪ್ರಶಸ್ತಿಯನ್ನು ನಮ್ಮ ಗ್ರಾಮದ ಆರಾಧ್ಯ ದೇವರಾದ ಮಾರುತೇಶ್ವರನಿಗೆ ಅರ್ಪಿಸುತ್ತೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಬಾಬರಿ, ಸ್ನೇಹಿತರಾದ ಸುರೇಶ ಮುಧೋಳ, ಪರಸಪ್ಪ ಹಳ್ಳಿಕೇರಿ, ಹನುಮೇಶ ಗಂಗರಾತ್ರಿ, ಅಜ್ಜಪ್ಪ ಜೋಗಿನ, ಜಂಬಣ್ಣ ಕಟಗಿ, ಸತೀಶ ಜೋಗಿನ, ಮಲ್ಲಪ್ಪ ಯತ್ನಟ್ಟಿ, ಮಲ್ಲಪ್ಪ ಉಳಿಗೇರ, ಈರಪ್ಪ ಕೊಪ್ಪದ, ಕರಿಯಪ್ಪ ಬಾಬರಿ, ರಮೇಶ ಜೋಗಿನ, ಗೂಳಪ್ಪ ಹುಚ್ಚಪ್ಪನವರ, ಮಲ್ಲಪ್ಪ ಮಡಿವಾಳರ, ಯಮನೂರಪ್ಪ ಗದಗ, ಶರಣಪ್ಪ ಜೋಗಿನ, ಬಾಳಪ್ಪ ಗಂಗರಾತ್ರಿ ಮುಂತಾದವರಿದ್ದರು.

# ಕ್ರಾಂತಿಗೀತೆ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡದ ಡಾ. ಬಿ.ಆರ್. ಅಂಬೇಡ್ಕರ್ ಅಧ್ಯಯನ ವಿಭಾಗವು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 134ನೇ ಜಯಂತಿ ಆಚರಣೆ ನಿಮಿತ್ತ ಆಯೋಜಿಸಿದ್ದ ರಾಷ್ಟ್ರಮಟ್ಟದ ವಿಚಾರ ಸಂಕಿರಣ ಮತ್ತು ವಿಶ್ವವಿದ್ಯಾಲಯ ವ್ಯಾಪ್ತಿಯ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳ ಸಮ್ಮೇಳನದಲ್ಲಿ ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಬಿ.ಎ 2ನೇ ಸೆಮಿಸ್ಟರ್ ವಿದ್ಯಾರ್ಥಿನಿ ರಂಜಿತಾ ದೇವಪ್ಪ ಕಡಿಯವರ ಕ್ರಾಂತಿಗೀತೆ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದಿದ್ದಾಳೆ.

ಗೌರವ ಪ್ರಶಸ್ತಿ ಪತ್ರದೊಂದಿಗೆ 3ಸಾವಿರ ರೂಪಾಯಿ ನಗದು ಬಹುಮಾನಕ್ಕೆ ಪಾತ್ರಳಾಗಿರುವ ಈಕೆಯ ಸಾಧನೆಯನ್ನು ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರು, ಸದಸ್ಯರು, ಬೋಧಕರು ಮತ್ತು ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಪ್ರಶಂಸಿದ್ದಾರೆ.

ಕಾಲೇಜಿನ ಎನ್.ಎಸ್.ಎಸ್. ಘಟಕದ ಉತ್ತಮ ಸ್ವಯಂ ಸೇವಕಿಯಾಗಿರುವ ಈಕೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಡಾ. ಸುಧಾ ಕೌಜಗೇರಿ, ಎನ್.ಎಸ್.ಎಸ್. ಘಟಕದ ಸಂಯೋಜಕ ಡಾ. ಅಪ್ಪಣ್ಣ ಹಂಜೆ ಸೇರಿದಂತೆ ಸಮಸ್ತ ಬೋಧಕರು, ಬೋಧಕೇತರ ಸಿಬ್ಬಂದಿಗಳು ವಿಶೇಷವಾಗಿ ಗೌರವಿಸಿ ಸನ್ಮಾನಿಸಿದ್ದಾರೆ.

# ಪ್ರವಾಸಿ ಭಾಗಿದಾರರ ಆಸಕ್ತಿಯನ್ನು ಸಂಗ್ರಹಿಸುವ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಪ್ರವಾಸೋದ್ಯಮವನ್ನು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಚುರಪಡಿಸುವ ದೃಷ್ಟಿಯಿಂದ, ಕರ್ನಾಟಕ ರಾಜ್ಯ ಪ್ರವಾಸಿ ತಾಣಗಳನ್ನು ಹಾಗೂ ನಾಡಿನ ಕಲೆ, ಸಂಸ್ಕೃತಿಕ ಪರಂಪರ ಸೇರಿದಂತೆ ವಾಸ್ತುಶಿಲ್ಪವನ್ನು ಇತರೆ ರಾಷ್ಟ್ರಗಳಿಗೆ ಪರಿಚಯಿಸುವ ಸಲುವಾಗಿ, ಪ್ರವಾಸಿಗರನ್ನು ಆಕರ್ಷಿಸಲು ವಿವಿಧ ದೇಶಗಳಲ್ಲಿ ನಡೆಯಲಿರುವ ಪ್ರಮುಖ ಅಂತಾರಾಷ್ಟ್ರೀಯ ಮೇಳಗಳಲ್ಲಿ ಹಾಗೂ ದೇಶದ ವಿವಿಧ ಭಾಗಗಳಲ್ಲಿ ಆಯೋಜಿಸಲ್ಪಡುವ ವಿವಿಧ ರಾಷ್ಟ್ರೀಯ ಮೇಳಗಳಲ್ಲಿ ಇಲಾಖೆಯು ಪ್ರತ್ಯೇಕವಾಗಿ ಮಳಿಗೆ ಜಾಗವನ್ನು ಪಡೆದು ನಾಡಿನ ಕಲೆ, ಸಂಸ್ಕೃತಿ, ಪರಂಪರೆ, ಶ್ರೀಮಂತ ಇತಿಹಾಸ, ವನ್ಯಜೀವಿ ಮತ್ತು ಪ್ರವಾಸಿತಾಣಗಳ ಅತ್ಯಾಕರ್ಷಕ ವಿನ್ಯಾಸಗಳಲ್ಲಿ ಮಳಿಗೆಯನ್ನು ತೆರೆದು, ರಾಜ್ಯದ ಪ್ರವಾಸಿ ಭಾಗಿದಾರರೊಂದಿಗೆ ಈ ಮೇಳಗಳ ಸಂದರ್ಭದಲ್ಲಿ ಇಲಾಖಾ ವತಿಯಿಂದ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಮುಖ ನಗರಗಳಲ್ಲಿ ಇಲಾಖಾ ವತಿಯಿಂದ 828 ರೋಡ್-ಷೋ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಆಯೋಜಿಸುತ್ತಾ ಬಂದಿದೆ.

2025-26ನೇ ಸಾಲಿನಲ್ಲಿಯೂ ದೇಶದ ವಿವಿಧ ಭಾಗಗಳಲ್ಲಿ, ವಿವಿಧ ದೇಶಗಳಲ್ಲಿ ನಡೆಯುವ ರಾಷ್ಟ್ರೀಯ, ಅಂತಾರಾಷ್ಟ್ರೀಯ ಮೇಳಗಳಲ್ಲಿ ಇಲಾಖೆಯು ಭಾಗವಹಿಸುವ ಸಂಬಂಧವಾಗಿ ಎಲ್ಲಾ ಮೇಳಗಳನ್ನು ಹಾಗೂ ಇಲಾಖಾ ವತಿಯಿಂದ ಆಯೋಜಿಸಲು ಉದ್ದೇಶಿಸಲಾದ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ರೋಡ್-ಷೋಗಳ ಸಂಭಾವ್ಯ ಪಟ್ಟಿಯನ್ನು ಒಳಗೊಂಡಂತೆ ರಾಜ್ಯ ಪ್ರವಾಸೋದ್ಯಮ ಕ್ಷೇತ್ರದಲ್ಲಿ ತೊಡಗಿರುವ ಎಲ್ಲಾ ಪ್ರವಾಸಿ ಭಾಗಿದಾರರ ಆಸಕ್ತಿಯನ್ನು ಸಂಗ್ರಹಿಸಲು ಇಲಾಖೆಯ ಅಧಿಕೃತ ಜಾಲತಾಣ www.karnataka-tourism.org. https://docs.google.com/forms/d/e/1FAIpQLSdRQ11QqHE@ZO4 z6ul.qu3ieZn5SAQ5s2ffGObi-Jwh3USRO7SA/viewform?embedded=true voting poll ಸೃಜಿಸಲಾಗಿದೆ.

ಗದಗ ಜಿಲ್ಲೆಯಲ್ಲಿನ ಪ್ರವಾಸೋದ್ಯಮ ಕ್ಷೇತ್ರದಲ್ಲಿ ತೊಡಗಿರುವ ಎಲ್ಲಾ ಟ್ರಾವೆಲ್-ಟೂರಿಸಮ್ ಹೋಟೆಲ್ ಮತ್ತು ರೆಸಾರ್ಟ್ ಅಸ್ಸೊಸಿಯೆಷನ್ಸ್ ಹಾಗೂ ಎಲ್ಲಾ ಪ್ರವಾಸಿ ಭಾಗಿದಾರರಿಗೆ ಗರಿಷ್ಠ ಮಟ್ಟದಲ್ಲಿ ವೋಟಿಂಗ್ ಮಾಡುವಂತೆ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜೈನ ಅಧ್ಯಯನ ಪೀಠದ ಸಂಯೋಜಕರಾಗಿ

# ಡಾ. ಜಿನದತ್ತ ಹಡಗಲಿ ನೇಮಕ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ವಿಶ್ವವಿದ್ಯಾಲಯದ ಜೈನ ಅಧ್ಯಯನ ಪೀಠದ ಚಟುವಟಿಕೆಗಳನ್ನು ಪುನಶ್ಚೇತನಗೊಳಿಸಿ, ಕ್ರಿಯಾಶೀಲಗೊಳಿಸಲು ಹಿರಿಯ ಕನ್ನಡ ಪ್ರಾಧ್ಯಪಕ ಹಾಗೂ ಜೈನ ಧರ್ಮದ ವಿದ್ವಾಂಸ ಡಾ. ಜಿನದತ್ತ ಹಡಗಲಿ ಅವರನ್ನು ಸಂಯೋಜಕರನ್ನಾಗಿ ನೇಮಿಸಿ, ಕವಿವಿ ಕುಲಪತಿಗಳು ಆದೇಶಿಸಿದ್ದು, ಎಪ್ರಿಲ್ 17ರಂದು ಡಾ. ಜಿನದತ್ತ ಹಡಗಲಿ ಕರ್ತವ್ಯ ವಹಿಸಿಕೊಂಡರು.



ಸುಮಾರು 33 ವರ್ಷಕ್ಕೂ ಹೆಚ್ಚು ಅವಧಿಗೆ ಕನ್ನಡ ಪ್ರಾಧ್ಯಾಪಕರಾಗಿ, ಸಂಶೋಧಕರಾಗಿ, ಸಂಶೋಧನಾ ಮಾರ್ಗದರ್ಶಕರಾಗಿ ಅಧ್ಯಯನ ಮತ್ತು ಬೋಧನೆಯಲ್ಲಿ ಅಪಾರ ಅನುಭವ, ಶೈಕ್ಷಣಿಕ ಕಳಕಳಿ ಹೊಂದಿರುವ ಡಾ. ಜಿನದತ್ತ ಹಡಗಲಿ ಅವರನ್ನು ಸಂಯೋಜಕರಾಗಿ ನಿಯೋಜನೆ ಮಾಡಲಾಗಿದ್ದು, ಅಧ್ಯಯನ ಪೀಠದಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡಲು ಕರ್ನಾಟಕ ವಿಶ್ವವಿದ್ಯಾಲಯ ಅವರಿಗೆ ಅವಕಾಶ ಕಲ್ಪಿಸಿಕೊಟ್ಟಿದೆ.

ಡಾ. ಜಿನದತ್ತ ಹಡಗಲಿ ಜೈನ ಸಂಸ್ಕೃತಿ ಮತ್ತು ಸಾಹಿತ್ಯ ಟ್ರಸ್ಟ್‌ನ ಅಧ್ಯಕ್ಷರಾಗಿ, ಜೆಎಸ್‌ಎಸ್ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥರಾಗಿ, ಧಾರವಾದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಮತ್ತು ಕರ್ನಾಟಕ ವಿದ್ಯಾವರ್ಧಕ ಸಂಘದ ಕಾರ್ಯಕಾರಿ ಸಮಿತಿ ಸದಸ್ಯರಾಗಿ ಅಪಾರ ಅನುಭವ ಹೊಂದಿದ್ದಾರೆ.

ನಿಕಟಪೂರ್ವ ಸಂಯೋಜಕರಾದ ಡಾ. ಮಲ್ಲಿಕಾರ್ಜುನ ಪಾಟೀಲ್ ಅವರು ಡಾ. ಜಿನದತ್ತ ಹಡಗಲಿಯವರಿಗೆ ಪೀಠದ ಕಚೇರಿಯಲ್ಲಿ ಅಧಿಕಾರ ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಜೈನ ಸಂಸ್ಕೃತಿ ಮತ್ತು ಸಾಹಿತ್ಯ ಟ್ರಸ್ಟ್‌ನ ಉಪಾಧ್ಯಕ್ಷ ಡಾ. ಭರಮಪ್ಪ ಭಾವಿ, ಪ್ರಧಾನ ಕಾರ್ಯದರ್ಶಿ ಶಾಂತಿನಾಥ ಹೋತಪೇಟಿ, ಕಾರ್ಯದರ್ಶಿ ಶಾಂತರಾಜ ಮಲ್ಲಸಮುದ್ರ, ನಿರ್ದೇಶಕರಾದ ಧರಣೇಂದ್ರ ಜವಳಿ, ಶ್ರೀಧರ ಬಸ್ತಿ, ಕಾರ್ಯಕಾರಿ ಮಂಡಳಿ ಸದಸ್ಯರಾದ ಆರ್.ಎ. ಬಾಳಿಕಾಯಿ, ಡಾ. ವೀರಪ್ಪ ಪೂಜಾರ, ಬಸಲಿಂಗಪ್ಪ ಅರವಳದ, ಧನಪಾಲ ಜೆ.ಮುನ್ನೊಳ್ಳಿ, ಸುಕುಮಾರ ಕೊಕಟನೂರ, ಜೈನ ಅಧ್ಯಯನ ಪೀಠದ ಉಪನ್ಯಾಸಕರು, ಸಿಬ್ಬಂದಿಗಳು, ಜೈನ ಧರ್ಮದ ಅಭಿಮಾನಿಗಳು ಸೇರಿದಂತೆ ಮತ್ತಿತರರು ಹಾಜರಿದ್ದರು.

ಜೈನ ಸಂಸ್ಕೃತಿ ಮತ್ತು ಸಾಹಿತ್ಯ ಟ್ರಸ್ಟ್‌ನ ಗೌರವಾಧ್ಯಕ್ಷ ಡಾ. ಅಜಿತ್ ಪ್ರಸಾದ ಅವರು ಡಾ. ಜಿನದತ್ತ ಹಡಗಲಿ ಅವರಿಗೆ ಅಭಿನಂದಿಸಿ ಶುಭ ಕೋರಿದ್ದಾರೆ.

## ಹಣ, ಹೆಂಡಕ್ಕೆ ಮತ ನೀಡಿದರೆ ಮುಂದಿನ ಜನ್ಮದಲ್ಲಿ ನಾಯಿ, ಬೆಕ್ಕುಗಳಾಗಿ ಹುಟ್ಟುತ್ತೀರಿ: ಬಿಜೆಪಿ ಶಾಸಕಿ ಉಷಾ ಠಾಕೂರ್

■ವಿಜಯಸಾಕ್ಷಿ ಸುದ್ದಿ, ಇಂದೋರ್

ಹಣ, ಹೆಂಡದಂತಹ ಉಡುಗೊರೆಗಳಿಂದ ಆಕರ್ಷಿತರಾಗಿ ಮತ ನೀಡಿದರೆ ಮತದಾರರು ಮುಂದಿನ ಜನ್ಮದಲ್ಲಿ ಪ್ರಾಣಿಗಳಾಗಿ ಜನಿಸುತ್ತೀರಿ ಎಂದು ಬಿಜೆಪಿ ಶಾಸಕಿ ಮತ್ತು ಮಧ್ಯಪ್ರದೇಶದ ಮಾಜಿ ಸಚಿವೆ ಉಷಾ ಠಾಕೂರ್ ಹೇಳಿದ್ದಾರೆ.

ತಮ್ಮ ಮಾವ್ ವಿಧಾನಸಭಾ ಕ್ಷೇತ್ರದ ಹಸಲ್ಪುರ್ ಗ್ರಾಮದಲ್ಲಿ ಬುಧವಾರ ನಡೆದ ಸಭೆಯಲ್ಲಿ ಅವರು ಮಾಡಿದ ಹೇಳಿಕೆಗಳ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದ್ದು, ವಿರೋಧ ಪಕ್ಷ ಕಾಂಗ್ರೆಸ್ ಶಾಸಕಿಯ "ಸಂಪ್ರದಾಯವಾದಿ ಚಿಂತನೆ"ಗಾಗಿ ಟೀಕಿಸಿದೆ.



ಜೈ ಭೀಮ್ ಸಂಘರ್ಷ ಸಮಿತಿ ಗದಗ ಜಿಲ್ಲಾಧ್ಯಕ್ಷ ಗಣೇಶ್ ಹುಬ್ಬಳ್ಳಿ ಅವರ ಮನೆಯಲ್ಲಿ ಭಾರತ ರತ್ನ, ಸರವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರರ ಜಯಂತಿಯನ್ನು ಆಚರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಗಣೇಶ ಹುಬ್ಬಳ್ಳಿ ಅವರ ತಾಯಿ ಬಾಲಮ್ಮ ಯಲ್ಲಪ್ಪ ಹುಬ್ಬಳ್ಳಿ, ಚಟ್ಟವ್ವ ಬಳ್ಳಾರಿ, ಯಲ್ಲಮ್ಮ ಗಣೇಶ್ ಹುಬ್ಬಳ್ಳಿ, ಸೌಂದರ್ಯ, ತೇಜಸ್ವಿನಿ, ಯಶವಂತ, ಪಾರ್ವತಿ, ಸುಜಲ, ಸಹನಾ ಸೇರಿದಂತೆ ಕುಟುಂಬದವರು, ಸಂಘಟನೆಯವರು ಉಪಸ್ಥಿತರಿದ್ದರು.

ಜ. ತೋಂಟದಾರ್ಯ ಜಾತ್ರಾ ಮಂಗಲೋತ್ಸವ ಕಾರ್ಯಕ್ರಮದಲ್ಲಿ ಶಾಸಕ ಸಿ.ಸಿ. ಪಾಟೀಲ

# ತೋಂಟದಾರ್ಯ ಜಾತ್ರೆ ಇತರೆ ಜಾತ್ರೆಗಳಿಗೆ ಮಾದರಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಠಗಳು ಭಾವೈಕ್ಯತೆ, ಸಹಕಾರಕ್ಕೆ ಕೇಂದ್ರ ಶಕ್ತಿಯಾಗಿರಬೇಕು ಎಂದು ನಂಬಿದ್ದ ಲಿಂ. ಡಾ.ತೋಂಟದ ಸಿದ್ಧಲಿಂಗ ಶ್ರೀಗಳ ಕಾರಣದಿಂದ ಗದಗ ಜಿಲ್ಲೆ ಭಾವೈಕ್ಯತೆಯ ಬೀಡಾಗಿದೆ ಎಂದು ಶಾಸಕರು ಹಾಗೂ ಮಾಜಿ ಸಚಿವರಾದ ಸಿ.ಸಿ. ಪಾಟೀಲ ನುಡಿದರು.

ಅವರು ನಗರದ ತೋಂಟದಾರ್ಯ ಮಠದ 2025ನೇ ಜಾತ್ರಾ ಮಹೋತ್ಸವದ ಮಂಗಲೋತ್ಸವ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡುತ್ತಿದ್ದರು.

ಒಂದು ವಿಶ್ವವಿದ್ಯಾಲಯಕ್ಕಿಂತ ಹೆಚ್ಚು ಪುಸ್ತಕಗಳನ್ನು ಶ್ರೀಮಠದ ಮೂಲಕ ಪ್ರಕಟಿಸಿದ ಸಿದ್ಧಲಿಂಗ ಶ್ರೀಗಳು ನಡೆದಾಡುವ ವಿಶ್ವವಿದ್ಯಾಲಯದಂತಿದ್ದರು. ಜಾತ್ರೆಗಳು ಮನರಂಜನೆಗೆ ಸೀಮಿತವಾಗದೇ




ಜನೋತ್ಸವವಾಗಬೇಕು ಎನ್ನುತ್ತಿದ್ದ ಶ್ರೀಗಳು ಅದರಂತೆ ತೋಂಟದಾರ್ಯ ಮಠದ ಜಾತ್ರೆಯನ್ನು ಇತರೆ ಜಾತ್ರೆಗಳಿಗೆ ಮಾದರಿಯನ್ನಾಗಿಸಿದರು. ಡಾ. ತೋಂಟದ ಸಿದ್ಧರಾಮ ಶ್ರೀಗಳು ಮಠದ ಭವ್ಯ ಪರಂಪರೆಯನ್ನು ಸಮರ್ಥವಾಗಿ ಮುನ್ನಡೆಸುತ್ತಿದ್ದಾರೆ. ನರಗುಂದದ ತೋಂಟದಾರ್ಯ ಶಾಖಾಮಠದಲ್ಲಿ ನಡೆಯುತ್ತಿರುವ ಜಾತ್ರೆಗೆ ನನ್ನನ್ನು ಅಧ್ಯಕ್ಷನನ್ನಾಗಿಸಿದ್ದು ನನ್ನ ಅದೃಷ್ಟ ಎಂದರು.

ಧಾರವಾಡದ ಐ.ಐ.ಟಿ ಡೀನ್, ವಿಜ್ಞಾನಿಗಳಾದ ಡಾ. ಎಸ್.ಎಂ. ಶಿವಪ್ರಸಾದ ಮಾತನಾಡಿ, ಆಧುನಿಕ ದಿನಗಳಲ್ಲಿ ಪ್ರತಿಯೊಂದು ಕ್ಷೇತ್ರವೂ ತೀವ್ರಗತಿಯಲ್ಲಿ ನವೀಕರಣ ಹೊಂದುತ್ತಿದ್ದು, ತಂತ್ರಜ್ಞಾನ ಬೆಳೆಯುತ್ತಿರುವ ವೇಗವನ್ನು ಊಹಿಸಲು ಸಹ ಸಾಧ್ಯವಿಲ್ಲ. ಎಐ (ಕೃತಕ ಬುದ್ಧಿಮತ್ತೆ) ಮಾನವನ ಬುದ್ಧಿಶಕ್ತಿಗೂ ಮೀರಿ ಕೆಲಸಗಳನ್ನು ಮಾಡುತ್ತಿದೆ. ಮುಂದಿನ ದಿನಗಳಲ್ಲಿ ಅನೇಕ ವೃತ್ತಿಗಳು ಅರ್ಥ ಕಳೆದುಕೊಳ್ಳುತ್ತವೆ. ಆದ್ದರಿಂದ ನಮ್ಮ ಮಕ್ಕಳಿಗೆ ನೀಡುತ್ತಿರುವ ಶಿಕ್ಷಣ ಎಷ್ಟು ಅಪ್‌ಡೇಟೆಡ್ ಆಗಿದೆ ಎಂದು ಖಾತ್ರಿ ಮಾಡಿಕೊಳ್ಳುವುದು ಅನಿವಾರ್ಯ ಎಂದರು.

ಮುರುಘಾಮಠ ಧಾರವಾಡದ ಡಾ. ಮಲ್ಲಿಕಾರ್ಜುನ ಮಹಾಸ್ವಾಮಿಗಳು, ಮಣಕವಾಡ ದೇವಮಂದಿರ ಮಹಾಮಠದ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು, ರುದ್ನೂರು ತೋಂಟದಾರ್ಯ ಶಾಖಾಮಠದ ಚನ್ನಮಲ್ಲಿಕಾರ್ಜುನ ಸ್ವಾಮಿಗಳು ಸಮ್ಮುಖ ವಹಿಸಿದ್ದರು. ರಬಕವಿ ಗುರುದೇವ ಬ್ರಹ್ಮಾನಂದಾಶ್ರಮದ ಗುರುಸಿದ್ಧ ಮಹಾಸ್ವಾಮಿಗಳು, ಅಗಡಿ-ಗುತ್ತಲದ ಪ್ರಭುಸ್ವಾಮಿಮಠದ ಗುರುಸಿದ್ಧ ಮಹಾಸ್ವಾಮಿಗಳನ್ನು ಸನ್ಮಾನಿಸಲಾಯಿತು. ಹಿಂದೂಸ್ತಾನಿ ಗಾಯಕಿ ವಿದುಷಿ ರೇಣುಕಾ ನಾಕೋಡ ಇವರಿಂದ ವಚನ ಸಂಗೀತ ಜರುಗಿತು.

ತೋಂಟದಾರ್ಯ ಜಾತ್ರಾ ಸಮಿತಿ ಅಧ್ಯಕ್ಷ ಡಾ. ಧನೇಶ ದೇಸಾಯಿ ಸ್ವಾಗತಿಸಿದರು. ತೋಂಟದಾರ್ಯ ಮಠದ ಜಾತ್ರಾ ಸಮಿತಿ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಶ್ರೀಮಠದ ಸದ್ಭಕ್ತರು ಹಾಜರಿದ್ದರು.

ನಾಗನೂರು-ಬೆಳಗಾವಿ ರುದ್ರಾಕ್ಷಿಮಠದ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು ಮಾತನಾಡಿ, ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಕೋಮು ಸೌಹಾರ್ದತೆಯ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರದಿಂದ ಪ್ರಶಸ್ತಿ ಪಡೆದವರು. ಅನೇಕ ಪ್ರತಿಭಾವಂತರನ್ನು ಪ್ರೋತ್ಸಾಹಿಸಿದ ಅವರು ತೋಂಟದಾರ್ಯ ಮಠದ ವೈಭವವನ್ನು ಮತ್ತೆ ಮರಳಿ ತಂದರು. ನಮ್ಮ ಗುರುಗಳಾದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಿದ್ಧಲಿಂಗ ಶ್ರೀಗಳ ಪ್ರತಿರೂಪವಾಗಿದ್ದಾರೆ ಎಂದರು.

# ದಲಿತ ಹೋರಾಟಗಾರ ಸತೀಶ ಹೂಲಿಯವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ನಗರಸಭೆ ಗದಗ-ಬೆಟಗೇರಿ, ಗದಗ ಜಿಲ್ಲೆಯ ದಲಿತಪರ ಹಾಗೂ ವಿವಿಧ ಸಂಘಗಳ ಸಂಯುಕ್ತ ಆಶ್ರಯದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ ಹಾಗೂ ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಂ ಅವರ ಜಯಂತ್ಯುತ್ಸವದ ನಿಮಿತ್ತ ನಗರದ ಅಂಬೇಡ್ಕರ ಭವನದಲ್ಲಿ ನಡೆದ ಸಮಾರಂಭದಲ್ಲಿ ದಲಿತ ಮುಖಂಡರಾದ ಸತೀಶ ಹೂಲಿಯವರನ್ನು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರು ಸನ್ಮಾನಿಸಿ, ಗೌರವಿಸಿದರು.

ಈ ಸಂದರ್ಭದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಪೌರಾಯುಕ್ತ ರಾಜಾರಾಮ ಎಸ್.ಪವಾರ, ಮಹೇಶ ಪೋತದಾರ, ಮುಖಂಡರಾದ ಎಸ್.ಎನ್. ಬಳ್ಳಾರಿ, ಕೃಷ್ಣಾ ಪರಾಪೂರ, ಬಸವರಾಜ ಕಡೇಮನಿ, ಡಿ.ಜಿ. ಜೋಗಣ್ಣನವರ, ಸತೀಶ ಪಾಸಿ, ಅಶೋಕ ಕುಡುತಿನಿ, ದುರಗೇಶ ವಿಭೂತಿ, ಮಾರ್ತಂಡಪ್ಪ ಹಾದಿಮನಿ, ಎಸ್.ಸಿ/ಎಸ್.ಟಿ ದೌರ್ಜನ್ಯ ನಿಯಂತ್ರಣ ಸಮಿತಿ ಸದಸ್ಯರಾದ ಶರೀಫ ಬಿಳೇಯಲಿ, ಸಂಗಮೇಶ ಹಾದಿಮನಿ, ವಿನಾಯಕ ಬಳ್ಳಾರಿ ಸೇರಿದಂತೆ ದಲಿತಪರ ಸಂಘಟನೆಯ ಮುಖಂಡರು ಉಪಸ್ಥಿತರಿದ್ದರು.

ಸಾರ್ವಜನಿಕ ಅಹವಾಲು ಸ್ವೀಕಾರ, ಜನಸಂಪರ್ಕ ಸಭೆಯಲ್ಲಿ ಲೋಕಾಯುಕ್ತ ಡಿವೈಎಸ್‌ಪಿ ವಿಜಯಕುಮಾರ ಬಿರಾದಾರ

# ಸಾರ್ವಜನಿಕರ ಕೆಲಸಗಳಿಗೆ ವಿಳಂಬ ಬೇಡ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಾರ್ವಜನಿಕರೊಂದಿಗೆ ಸೂಕ್ತವಾಗಿ ಸ್ಪಂದಿಸದೇ ಸರ್ಕಾರಿ ಕೆಲಸಗಳನ್ನು ವಿನಾಕಾರಣ ವಿಳಂಬ ಮಾಡಿದರೆ, ಜನರಿಗೆ ತೊಂದರೆ ಕೊಟ್ಟರೆ ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಗದಗ ಜಿಲ್ಲಾ ಲೋಕಾಯುಕ್ತ ಡಿವೈಎಸ್‌ಪಿ ವಿಜಯಕುಮಾರ ಬಿರಾದಾರ ಎಚ್ಚರಿಕೆ ನೀಡಿದರು.

ನರೇಗಲ್ಲ ಪಟ್ಟಣ ಪಂಚಾಯಿತಿ ಕಾರ್ಯಾಲಯದಲ್ಲಿ ಜಿಲ್ಲಾ ಲೋಕಾಯುಕ್ತ ಉಪಾಧೀಕ್ಷಕರಿಂದ ಹಾಗೂ ಪೊಲೀಸ್ ನಿರೀಕ್ಷಕರಿಂದ ನಡೆದ ಸಾರ್ವಜನಿಕ ಅಹವಾಲು ಸ್ವೀಕಾರ, ಜನಸಂಪರ್ಕ ಸಭೆಯಲ್ಲಿ ಅವರು ಮಾತನಾಡಿದರು.

ಸಾರ್ವಜನಿಕರ ಅರ್ಜಿಗಳನ್ನು ಅನಗತ್ಯ ವಿಳಂಬ ಮಾಡದೇ ಶೀಘ್ರ ವಿಲೇವಾರಿ ಮಾಡುವಂತೆ, ಸೂಕ್ತ ಕಾರಣವಿಲ್ಲದೆ ತಿರಸ್ಕರಿಸದಂತೆ ಅಧಿಕಾರಿಗಳಿಗೆ ಸೂಚಿಸಿದ ವಿಜಯಕುಮಾರ ಬಿರಾದಾರ, ಸಾರ್ವಜನಿಕರೊಂದಿಗೆ ತಾಳ್ಮೆ



ಮತ್ತು ಸೌಜನ್ಯದಿಂದ ವರ್ತಿಸಬೇಕು ಎಂದರು. ಕೃಷಿ ಇಲಾಖೆಯಿಂದ ಲಭ್ಯವಾಗುವ ಸೌಲಭ್ಯಗಳು ಸಾಮಾನ್ಯ ರೈತನಿಗೂ ತಲುಪಬೇಕು. ರೈತರಿಗೆ ಅನುಕೂಲವಾಗುವಂತೆ ಕೆಲಸಗಳನ್ನು ಮಾಡಬೇಕು. ಇಲಾಖೆಯ ಯೋಜನೆಗಳು ಪ್ರತಿ ರೈತರಿಗೆ, ಪ್ರತಿ ಹಳ್ಳಿಗೆ ತಲುಪಿಸಬೇಕು ಎಂದರು. ಹೆಸ್ಕಾಂ ವ್ಯಾಪ್ತಿಗೆ ಬರುವ ಎಲ್ಲ 20 ಹಳ್ಳಿಗಳಿಗೂ ಸಮರ್ಪಕ ವಿದ್ಯುತ್ ಪೂರೈಕೆ ಮಾಡಬೇಕು ಎಂದು ನರೇಗಲ್ ಹೆಸ್ಕಾಂ ಅಧಿಕಾರಿಗಳಿಗೆ ಹಾಗೂ ಕಾಲಕಾಲಕ್ಕೆ ಜಾನುವಾರುಗಳ ತಪಾಸಣೆ ಮಾಡುವಂತೆ, ಪಶುಗಳಿಗೆ ಹಾಗೂ ಜನರಿಗೆ ಅನಕೂಲವಾಗುವಂತೆ ಸೇವೆ ಒದಗಿಸಬೇಕು ಎಂದು ಪಶು ಆಸ್ಪತ್ರೆಯ ವೈದ್ಯರಿಗೆ ಸಲಹೆ ನೀಡಿದರು. ಸರ್ಕಾರಿ ಆಸ್ಪತ್ರೆಯ ವೈದ್ಯರು ಸಿಬ್ಬಂದಿ ಕೊರತೆಯನ್ನು ನಿಭಾಯಿಸಿದರೆ ಇನ್ನೂ ಹೆಚ್ಚಿನ ಸೇವೆಯನ್ನು ಒದಗಿಸಬಹುದು. ನಮ್ಮಲ್ಲಿ ಅಂಬ್ಯುಲೆನ್ಸ್ ವ್ಯವಸ್ಥೆ ಇಲ್ಲವೆಂದು ನರೇಗಲ್ ವೈದ್ಯಾಧಿಕಾರಿ ಕೇಳಿಕೊಂಡರು. ನರೇಗಲ್ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಎರಡು ನೀರಿನ ಟ್ಯಾಂಕುಗಳು ಸೋರುತ್ತಿರುವ ಕುರಿತು ದೂರು ಬಂದಿದೆ. ಒಂದು ವಾರದಲ್ಲಿ ಸರಿ ಆಗಬೇಕು ಎಂದು ಲೋಕಾಯುಕ್ತರು ಮುಖ್ಯಾಧಿಕಾರಿಗೆ ತಿಳಿಸಿದರು.

ಇದೇ ವೇಳೆ ಸಾರ್ವಜನಿಕರು ಲೋಕಾಯುಕ್ತರಿಗೆ ದೂರುಗಳನ್ನು ನೀಡಿದರು. ನರೇಗಲ್ಲ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಹೇಶ ನಿಡಶೇಶಿ, ವೈದ್ಯಾಧಿಕಾರಿ ಡಾ. ಎ.ಡಿ. ಸಾಮುದ್ರಿ, ಉಪತಹಸೀಲ್ದಾರ ಎಸ್.ಜಿ. ದೊಡ್ಡಮನಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಪ್ರಾಚಾರ್ಯರಿಂದ ಪ್ರವೇಶಾತಿ ಮಾಹಿತಿ ಪಡೆದು, ಗ್ರಾಮೀಣ ಮಕ್ಕಳಿಗೆ ಅನಕೂಲವಾಗುವಂತೆ ಉತ್ತಮ ಶಿಕ್ಷಣ ನೀಡಬೇಕು ಹಾಗೂ ಪ್ರವೇಶಾತಿ ಕಡಿಮೆಯಾಗದಂತೆ ಯೋಜನೆಗಳನ್ನು ಹಮ್ಮಿಕೊಳ್ಳುವಂತೆ ಸೂಚನೆ ನೀಡಿದರು. ಸರ್ಕಾರಿ ಪಿಯು ಕಾಲೇಜಿಗೆ ತೋಟದ ಲೈನ್‌ನಿಂದ ವಿದ್ಯುತ್ ಪಡೆದುಕೊಂಡಿರುವ ಬಗ್ಗೆ ಪ್ರಾಚಾರ್ಯರು ಮಾಹಿತಿ ನೀಡಿದ ಬಳಿಕ ಹೆಸ್ಕಾಂ ಎಸ್‌ಓಗೆ ವಿದ್ಯುತ್ ವ್ಯವಸ್ಥೆ ಮಾಡಿಕೊಡುವಂತೆ ಲೋಕಾಯುಕ್ತ ಡಿವೈಎಸ್‌ಪಿ ವಿಜಯ ಬಿರಾದಾರ ಸೂಚಿಸಿದರು.

ಎಂ.ಬಿ.ಎಚ್. ಶಿಕ್ಷಣ ಮಹಾವಿದ್ಯಾಲಯದಲ್ಲಿ ಜಿಲ್ಲಾಮಟ್ಟದ ಕ್ರೀಡಾಕೂಟ

# ಸದೃಢವಾದ ದೇಹಕ್ಕೆ ಕ್ರೀಡೆಗಳು ಅತ್ಯಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿಯ ಶ್ರೀಮತಿ ಎಂ.ಬಿ. ಹುಯಿಲಗೋಳ ಶಿಕ್ಷಣ ಮಹಾವಿದ್ಯಾಲಯ ಹಾಗೂ ಭಾರತ ಸರಕಾರದ ನೆಹರು ಯುವ ಕೇಂದ್ರ ಗದಗ ಇವರ ಸಂಯುಕ್ತಾಶ್ರಯದಲ್ಲಿ ಎಂ.ಬಿ. ಹುಯಿಲಗೋಳ ಶಿಕ್ಷಣ ಮಹಾವಿದ್ಯಾಲಯದಲ್ಲಿ ಜಿಲ್ಲಾ ಮಟ್ಟದ ಕ್ರೀಡಾಕೂಟವನ್ನು ಆಯೋಜಿಸಲಾಗಿತ್ತು.

ವಿದ್ಯಾದಾನ ಸಮಿತಿಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ ಕ್ರೀಡಾಜ್ಯೋತಿಯನ್ನು ಬರಮಾಡಿಕೊಂಡು ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಮಾತನಾಡಿ, ಪ್ರಶಿಕ್ಷಣಾರ್ಥಿಗಳು ಕೇವಲ ಪಠ್ಯ ಚಟುವಟಿಕೆಗಳಲ್ಲಷ್ಟೇ ಅಲ್ಲದೆ ಕ್ರೀಡೆಯಲ್ಲೂ ತಮ್ಮ ಪ್ರಾವಿಣ್ಯವನ್ನು ಮೆರೆಯಬೇಕು. ಸದೃಢವಾದ ದೇಹ ರಚನೆಗೆ ಕ್ರೀಡೆಗಳು ಅತ್ಯಗತ್ಯ.




ಪ್ರತಿಯೊಬ್ಬರೂ ಅವಕಾಶಗಳನ್ನು ಸದುಪಯೋಗ ಮಾಡಿಕೊಳ್ಳಬೇಕು ಎಂದರು.

ನೆಹರು ಯುವ ಕೇಂದ್ರದ ಕ್ರೀಡಾ ಆಯೋಜಕರಾದ ಎನ್. ರಂಜನಿ ಮಾತನಾಡಿ, ಕ್ರೀಡೆಯು ಪ್ರತಿಯೊಬ್ಬರ ಜೀವನಕ್ಕೂ ಅತ್ಯಗತ್ಯ. ಎಲ್ಲರೂ ಅವಕಾಶಗಳ ಸದ್ಬಳಕೆ ಮಾಡಿಕೊಳ್ಳಿ ಎಂದು ತಿಳಿಸಿ ಎಲ್ಲಾ ಪ್ರಶಿಕ್ಷಣಾರ್ಥಿಗಳಿಗೆ ಶುಭ ಹಾರೈಸಿದರು.

ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಗಂಗೂಬಾಯಿ ಪವಾರ ಮಾತನಾಡಿ, ಎಲ್ಲರೂ ಕ್ರೀಡೆಯಲ್ಲಿ ಭಾಗವಹಿಸಬೇಕು. ಸದೃಢ ದೇಹಕ್ಕೆ ಕ್ರೀಡೆಗಳು ತುಂಬಾ ಸಹಾಯಕಾರಿ. ಹಾಗಾಗಿ ಎಲ್ಲಾ ಪ್ರಶಿಕ್ಷಣಾರ್ಥಿಗಳು ಅಭ್ಯಾಸದ ಜೊತೆ ಜೊತೆಗೆ ಕ್ರೀಡೆಯಲ್ಲಿ ಭಾಗವಹಿಸಿ ಮಾನಸಿಕ, ಬೌದ್ಧಿಕ ವಿಕಾಸವನ್ನು ಪಡೆದುಕೊಂಡು ಭಾರತದ ಸದೃಢ ಪ್ರಜೆಗಳಾಗಬೇಕು ಎಂದು ತಿಳಿಸಿದರು.

ನೆಹರು ಯುವ ಕೇಂದ್ರದ ಕಾರ್ಯಕ್ರಮ ಸಂಯೋಜಕರಾದ ರವಿಕುಮಾರ ಹೊಂಬಾಳಿ, ಮಹಾವಿದ್ಯಾಲಯದ ದೈಹಿಕ ಶಿಕ್ಷಕರಾದ ರಮೇಶ ಲಮಾಣಿ ಮಾರ್ಗದರ್ಶನ ನೀಡಿದರು. ಪ್ರಶಿಕ್ಷಣಾರ್ಥಿಗಳಾದ ದೀಪಕ, ಆಫ್ರೀನ್, ಮಂಜುನಾಥ, ಅಭಿಷೇಕ, ಹಜರತ್ ಕ್ರೀಡಾಜ್ಯೋತಿಯನ್ನು ಹೊತ್ತು ತಂದರು.

ವೇದಿಕೆಯ ಮೇಲೆ ಮಹಾವಿದ್ಯಾಲಯದ ವಿದ್ಯಾರ್ಥಿ ಪ್ರತಿನಿಧಿ ಬಸವರಾಜ ಮೂಡ್ಲಗುಂದಿ, ಕ್ರೀಡಾ ಮಂತ್ರಿ ಸುರೇಶ ನಾಯಕ್ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಎಲ್ಲ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು, ಪ್ರಶಿಕ್ಷಣಾರ್ಥಿಗಳು ಪಾಲ್ಗೊಂಡಿದ್ದರು. ಪ್ರಶಿಕ್ಷಣಾರ್ಥಿ ಜ್ಯೋತಿ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಸವಿತಾ ಸ್ವಾಗತಿಸಿದರು. ವೀಣಾ ನಿರೂಪಿಸಿದರು. ಬೃಂದಾ ವಂದಿಸಿದರು.

# ಗದಗ ಜಿಲ್ಲಾ ಛಲವಾದಿ ಮಹಾಸಭಾದಿಂದ ಎಫ್.ಎಚ್. ಜಕ್ಕಪ್ಪನವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಬಾಬಾಸಾಹೇಬ ಅಂಬೇಡ್ಕರ್ ಜಯಂತಿ ಪ್ರಯುಕ್ತ ಕರ್ನಾಟಕ ಸರ್ಕಾರ ಕೊಡಮಾಡುವ 2025ರ ಸಾಲಿನ ಡಾ. ಬಿ.ಆರ್. ಅಂಬೇಡ್ಕರ ರಾಜ್ಯ ಮಟ್ಟದ ಪ್ರಶಸ್ತಿಗೆ ಹೋರಾಟಗಾರರಾದ ಎಫ್.ಎಚ್. ಜಕ್ಕಪ್ಪನವರ ಭಾಜನರಾದ ನಿಮಿತ್ತ ಗದಗ ಜಿಲ್ಲಾ ಛಲವಾದಿ ಮಹಾಸಭಾದ ವತಿಯಿಂದ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಛಲವಾದಿ ಮಹಾಸಭಾದ ಗೌರವಾಧ್ಯಕ್ಷ ಬಸವರಾಜ ಕಡೇಮನಿ ಮಾತನಾಡುತ್ತ, ಎಫ್.ಎಚ್. ಜಕ್ಕಪ್ಪನವರ ಅವರು ವಿಧಾನಸಭೆ ಅಥವಾ ವಿಧಾನ ಪರಿಷತ್ತಿಗೆ ಆಯ್ಕೆಯಾಗಿ ಬಂದರೆ ದಲಿತರಿಗೆ ಹೆಚ್ಚು ಅನುಕೂಲವಾಗಲಿದೆ ಎಂದು ಶುಭ ಕೋರಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಆನಂದ ಶಿಂಗಾಡಿ, ಶರೀಫ್ ಬಿಳೆಯಲಿ, ಮಂಜುನಾಥ ಗೊಂದಿಯವರ, ಶಿಕ್ಷಕರಾದ ರಾಜೇಶ ಚೌದ್ರಿ, ಮಲ್ಲೇಶ್ ಹೊಸಮನಿ, ಮುತ್ತು ಬಿಳೆಯಲಿ ಉಪಸ್ಥಿತರಿದ್ದರು.

# ಗಾಯಾಳುವಿನ ಆರೋಗ್ಯ ವಿಚಾರಿಸಿದ ಅಧಿಕಾರಿಗಳು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬುಧವಾರ ರಾತ್ರಿ ಗೊಜನೂರು ಗ್ರಾಮದಲ್ಲಿ ಭಾರೀ ಮಳೆಯಿಂದಾಗಿ ಮನೆಯ ಮೇಲ್ಛಾವಣಿಯ ಮೇಲೆ ಮರ ಬಿದ್ದುದ್ದರಿಂದ ಇಟ್ಟಿಗೆಗಳು ಮನೆಯೊಳಗೆ ಇದ್ದ ನಿರ್ಮಲಾ ಬಸನಗೌಡ ಬಾಗವಾಡ ಇವರ ಮೇಲೆ ಬಿದ್ದು ಗಾಯಗೊಂಡಿದ್ದರು.

ಅವರನ್ನು ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ದಾಖಲಿಸಿ ಸೂಕ್ತ ಚಿಕಿತ್ಸೆ ನೀಡಲಾಗಿದೆ. ಗುರುವಾರ ಸುದ್ದಿ ತಿಳಿದ ತಹಸೀಲ್ದಾರ ವಾಸುದೇವ ಸ್ವಾಮಿ ಮತ್ತು ತಾಲೂಕು ಪಂಚಾಯಿತಿ



ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು. ಅಲ್ಲದೆ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳಿಗೂ ಅಧಿಕಾರಿಗಳು ಭೇಟಿ ನೀಡಿದರು. ಈ ವೇಳೆ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಅಧಿಕಾರಿಗಳು ಹಾಜರಿದ್ದರು. ಮಳೆಯಿಂದಾಗಿ ಐದಾರು ಮನೆಗಳ ತಗಡಿನ ಶೆಡ್ ಹಾರಿ ಹೋಗಿದ್ದರಿಂದ ಜನರು ಸಾಕಷ್ಟು ಪರದಾಡಿದ್ದರು.

# ಅಳತೆಗೆ ತಕ್ಕ ಕೆಲಸ, ಕೆಲಸಕ್ಕೆ ತಕ್ಕ ಕೂಲಿ

■ವಿಜಯಸಾಕ್ಷಿ ಸುದ್ದಿ, ರೋಣ

ಗ್ರಾಮೀಣ ಪ್ರದೇಶದ ಸರ್ವಾಂಗೀಣ ಅಭಿವೃದ್ಧಿಗೆ ನರೇಗಾ ಯೋಜನೆ ಸಹಕಾರಿಯಾಗಿದ್ದು, ಕೂಲಿ ಕಾರ್ಮಿಕರನ್ನು ಗುರಿಯಾಗಿ ಇಟ್ಟುಕೊಂಡು ಈ ಯೋಜನೆ ಮಾಡಲಾಗಿದೆ. ಪ್ರಪಂಚದ ಯಾವುದೇ ದೇಶದಲ್ಲೂ ಇಂತಹ ಯೋಜನೆಯಿಲ್ಲ ಎಂದು ರೋಣ ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ ಕಂದಕೂರ ಅಭಿಪ್ರಾಯ ವ್ಯಕ್ತಪಡಿಸಿದರು.

ತಾಲೂಕಿನ ಚಿಕ್ಕಮಣ್ಣೂರ



ಗ್ರಾ.ಪಂ ವ್ಯಾಪ್ತಿಯಲ್ಲಿ 2025-26ನೇ ಸಾಲಿನ ಸಮುದಾಯ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು ಮಾತನಾಡುತ್ತಿದ್ದರು.

ಅಳತಕ್ಕೆ ತಕ್ಕ ಕೂಲಿ, ಕೂಲಿಗೆ ತಕ್ಕ ಹಣ ನರೇಗಾ ಯೋಜನೆಯಡಿ ನಿಮಗೆ ಸಿಗುತ್ತದೆ. ಗ್ರಾಮೀಣ ಪ್ರದೇಶದ ಕೂಲಿಕಾರರು ಕೆಲಸಕ್ಕಾಗಿ ಅಲೆದಾಡದೇ ತಮ್ಮ ಸ್ವಂತ ಗ್ರಾಮದಲ್ಲಿಯೇ ಬೇಡಿಕೆಯ ಪ್ರಕಾರ 100 ದಿನಗಳ ಖಾತ್ರಿ ಕೆಲಸವನ್ನು ಪಡೆಯಲು ಸಾಧ್ಯ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿರಿಯ ನಾಗರಿಕರು, ವಿಧವೆಯರು, ವಿಶೇಷ ಚೇತನರಿಗೆ ನರೇಗಾದಡಿ ದುಡಿಯಲು ಹೆಚ್ಚಿನ ಆದ್ಯತೆ, ಹಿರಿಯ ನಾಗರಿಕರು, ವಿಶೇಷ ಚೇತನರಿಗೆ ಕೆಲಸದ ಪ್ರಮಾಣದಲ್ಲಿ ಶೇ. 50 ರಿಯಾಯಿತಿಯಿದ್ದು, ಇದನ್ನು ಐಇಸಿ ಚಟುವಟಿಕೆ ಮೂಲಕ ಪ್ರಚಾರ ಮಾಡಲಾಗಿದೆ ಎಂದರು.

ಈ ಬಾರಿ ಗರಿಷ್ಠ ಮಟ್ಟದ ಕೆಲಸವನ್ನು ನಿಮಗೆ ಕೊಡುತ್ತೇವೆ. ಮಳೆ ಬಿದ್ದು ಕೃಷಿ ಚಟುವಟಿಕೆ ಆರಂಭವಾಗುವವರೆಗೂ ನರೇಗಾ ಯೋಜನೆಯಡಿ ಕೆಲಸ ಕೊಡಲಾಗುವುದು. ಪರಸ್ಥಳಕ್ಕೆ ಗುಳೆ ಹೋಗದೇ ಬೇಸಿಗೆ ಅವಧಿಯಲ್ಲಿ ಇದ್ದೂರಲ್ಲೇ ಕೆಲಸ ಮಾಡಿ. ಅಳತೆಗೆ ತಕ್ಕಂತೆ ಕೆಲಸ ಮಾಡಿದರೆ ದಿನಕ್ಕೆ 370 ರೂಪಾಯಿ ನಿಮ್ಮ ವೈಯಕ್ತಿಕ ಖಾತೆಗೆ ಜಮಾವಣೆಯಾಗುತ್ತದೆ ಎಂದು ತಿಳಿಸಿದರು.

### ಮಹಿಳೆಯ ಕಾರ್ಯಕ್ಕೆ ಇಓ ಚಂದ್ರಶೇಖರ್ ಕಂದಕೂರ ಮೆಚ್ಚುಗೆ

# ಸ್ವಚ್ಛ ವಾಹಿನಿಗೆ ಮಹಿಳೆಯೇ ಸಾರಥಿ!

**■ವಿಜಯಸಾಕ್ಷಿ ಸುದ್ದಿ, ರೋಣ**

ಸಾರಿಗೆ ವಾಹನಗಳನ್ನು ಪುರುಷರಷ್ಟೇ ಚಲಾಯಿಸುವ ಸಂಪ್ರದಾಯ ಕರಗುತ್ತಾ ಬಂದಿದೆ. ಇತ್ತೀಚೆಗೆ ಅಲ್ಲಲ್ಲಿ ಕೆಲವೇ ಕೆಲವು ಮಹಿಳೆಯರು ಬಸ್, ಲಾರಿ ಮೊದಲಾದ ಭಾರೀ ವಾಹನಗಳನ್ನು ವೃತ್ತಿಪರವಾಗಿ ಚಾಲನೆ ಮಾಡುವುದು ಕಂಡುಬರುತ್ತಿದೆ. ಹಾಗೆಯೇ ಗದಗ ಜಿಲ್ಲೆಯ ರೋಣ ತಾಲೂಕಿನ ಜಕ್ಕಲಿ ಗ್ರಾಮದ ಮಹಿಳೆ ಮಂಜುಳಾ ಸ್ವಚ್ಛ ವಾಹಿನಿ ಚಾಲಕಿಯಾಗಿ ಕೆಲಸ ಮಾಡುತ್ತಾ ಗ್ರಾಮಸ್ಥರ ಮೆಚ್ಚುಗೆಗೆ ಪಾತ್ರಳಾಗಿದ್ದಾಳೆ.




ಜಕ್ಕಲಿ ಗ್ರಾಮ ಪಂಚಾಯಿತಿಯಲ್ಲಿ ಸ್ವ-ಸಹಾಯ ಸಂಘದ ಮೂಲಕ ಚಾಲನಾ ತರಬೇತಿ ಪಡೆದು ಮಂಜುಳಾ ಯಲ್ಲಪ್ಪ ಮಾದರ ಸ್ವಚ್ಛ ವಾಹಿನಿ ಚಾಲಕಿಯಾಗಿ ಕಳೆದ 6 ತಿಂಗಳಿಂದ ಕೆಲಸ ಮಾಡುತ್ತಿದ್ದಾಳೆ. ಮಲ್ಲವ್ವ ಭರಮಪ್ಪ ಮಾದರ, ಶಿವವ್ವ ಈರಪ್ಪ ಮಾದರ, ರೇಣುಕಾ ಪ್ರಶಾಂತ ಮಾದರ ಇವರು ಕಸ ವಿಂಗಡನೆ ಕಾರ್ಯ ನಿರ್ವಹಿಸುತ್ತಿದ್ದಾರೆ. ಈ ಮೂಲಕ ಮಹಿಳೆಯರೇ ಸ್ವಚ್ಛ ವಾಹಿನಿಯನ್ನು ನಡೆಸಿಕೊಂಡು ಹೋಗುತ್ತಿದ್ದಾರೆ.

> ಜಕ್ಕಲಿ ಗ್ರಾಮದಲ್ಲಿ ಜನ ಪ್ರತಿನಿಧಿಗಳು, ಸಾರ್ವಜನಿಕರ ಸಹಕಾರದಿಂದ ಗ್ರಾಮದ ಸ್ವಚ್ಛತೆಯ ಜೊತೆಗೆ ಸ್ವ-ಸಹಾಯ ಸಂಘಗಳು ಸಬಲೀಕರಣಗೊಳ್ಳುತ್ತಿವೆ. ಮೇಲಧಿಕಾರಿಗಳ ಸಲಹೆ-ಮಾರ್ಗದರ್ಶನದ ಮೂಲಕ ಇದು ಸಾಧ್ಯವಾಗಿದೆ.
>
> **– ಶಿವಯೋಗಿ ರಿತ್ತಿ.**
>
> ಗ್ರಾ.ಪಂ ಅಭಿವೃದ್ಧಿ ಅಧಿಕಾರಿ, ಜಕ್ಕಲಿ.

> ತಾಲೂಕಿನ ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರಿಗೆ ಈಗಾಗಲೇ ಚಾಲನಾ ತರಬೇತಿ ಕೊಡಲಾಗಿದ್ದು, ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ಎಲ್ಲಾ ಗ್ರಾ.ಪಂಗಳಲ್ಲಿ ಮಹಿಳೆಯರು ಸ್ವಚ್ಛ ವಾಹಿನಿಗಳನ್ನು ನಿರ್ವಹಿಸಲಿದ್ದಾರೆ.
>
> **– ಚಂದ್ರಶೇಖರ ಕಂದಕೂರ.**
>
> ಕಾರ್ಯ ನಿರ್ವಾಹಕ ಅಧಿಕಾರಿಗಳು, ತಾ.ಪಂ ರೋಣ.

> ಸ್ವ-ಸಹಾಯ ಸಂಘದ ಮೂಲಕ ಡ್ರೈವಿಂಗ್ ತರಬೇತಿ ಪಡೆದುಕೊಂಡು ಕಳೆದ 6 ತಿಂಗಳಿಂದ ಕೆಲಸ ಮಾಡುತ್ತಿದ್ದೇನೆ. ಪ್ರತಿದಿನ ಮುಂಜಾನೆ ಕಸ ಸಂಗ್ರಹಿಸಿ ಗ್ರಾಮವನ್ನು ಸ್ವಚ್ಛಗೊಳಿಸುವಲ್ಲಿ ಖುಷಿ ಇದೆ. ಇದರಿಂದ ಸ್ವಂತ ದುಡಿಮೆ ಮತ್ತು ಆದಾಯ ಗಳಿಸುವ ಖುಷಿ ಇದೆ.
>
> **– ಮಂಜುಳಾ ಯಲ್ಲಪ್ಪ ಮಾದರ.**
>
> ಸ್ವಚ್ಛ ವಾಹಿನಿ ಚಾಲಕಿ.

ಗ್ರಾ.ಪಂ ವತಿಯಿಂದ ಮನೆ ಮನೆಗೆ ತೆರಳಿ ಕಸವನ್ನು ಸಂಗ್ರಹಿಸಿ, ಅವುಗಳನ್ನು ವಿಲೇವಾರಿ ಘಟಕದಲ್ಲಿ ವಿಂಗಡಿಸಿ, ವರ್ಷಾಂತ್ಯದಲ್ಲಿ ಅವುಗಳನ್ನು ಹರಾಜು ಹಾಕುವ ಮೂಲಕ ಆದಾಯ ಗಳಿಸುವ ಯೋಚನೆಯಲ್ಲಿ ಸ್ವ-ಸಹಾಯ ಸಂಘದ ಮಹಿಳೆಯರು ತೊಡಗಿದ್ದಾರೆ. ಅಲ್ಲದೆ ಪ್ರತಿ ಮನೆಗೆ ತಿಂಗಳಿಗೆ 30 ರೂ ಮತ್ತು ಅಂಗಡಿಗಳಿಗೆ ರೂ. 100 ರೂ.ಗಳನ್ನು ಸಂಗ್ರಹಿಸಿ ಅದರಲ್ಲೇ ತಮ್ಮ ವೇತನ ಪಾವತಿ ಮಾಡಿಕೊಂಡು, ಉಳಿದ ಹಣವನ್ನು ಉಳಿತಾಯ ಮಾಡಲು ಯೋಜನೆ ರೂಪಿಸಲಾಗಿದೆ. ಈ ಮೂಲಕ ಜಕ್ಕಲಿ ಗ್ರಾಮದ ಮಹಿಳೆಯರು ಸ್ವ-ಸಹಾಯ ಸಂಘದ ಮೂಲಕ ಗ್ರಾಮದ ಸ್ವಚ್ಛತೆ ಜೊತೆಗೆ ಸ್ವಾವಲಂಬಿ ಜೀವನ ನಡೆಸಲು ಅನುಕೂಲವಾಗಿದೆ. ಇವರ ಕಾರ್ಯಕ್ಕೆ ಗ್ರಾಮ ಪಂಚಾಯತಿ ಅಧ್ಯಕ್ಷರು, ಸರ್ವ ಸದಸ್ಯರು, ಅಭಿವೃದ್ಧಿ ಅಧಿಕಾರಿಗಳು, ಸಿಬ್ಬಂದಿಗಳು ಬೆಂಬಲವಾಗಿ ನಿಂತಿದ್ದಾರೆ.

ಜಕ್ಕಲಿ ಗ್ರಾಮ ಪಂಚಾಯಿತಿಗೆ ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರೋತ್ಸಾಹಿಸಿದ್ದಾರೆ. ಅಲ್ಲದೆ ಶೇಂಗಾ ಎಣ್ಣೆ, ಕುಸುಬೆ ಎಣ್ಣೆ ಗಾಣದ ಮೂಲಕ ಸಹ ಸ್ವ-ಸಹಾಯ ಸಂಘದ ಮಹಿಳೆಯರು ಆದಾಯ ಗಳಿಸುತ್ತಿರುವ ಬಗ್ಗೆ ಕಾರ್ಯ ನಿರ್ವಾಹಕ ಅಧಿಕಾರಿಗಳು ಪ್ರಶಂಸೆ ವ್ಯಕ್ತ ಪಡಿಸಿದರು. ಗ್ರಾಮದ ಕೆರೆಯಲ್ಲಿ ಮೀನುಗಾರಿಕೆ ಅಭಿವೃದ್ಧಿಗೆ ಸ್ವ-ಸಹಾಯ ಸಂಘದವರನ್ನು ಪ್ರೋತ್ಸಾಹಿಸಲು ಗ್ರಾ.ಪಂ ವತಿಯಿಂದ ಯೋಜನೆ ರೂಪಿಸಲಾಗುತ್ತಿದೆ. ಗ್ರಾಮದ ಮಹಿಳೆಯರನ್ನು ಮುಖ್ಯ ವಾಹಿನಿಗೆ ತರುವ, ಮಹಿಳೆಯರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡುವ ನಿಟ್ಟಿನಲ್ಲಿ ಗ್ರಾ.ಪಂ ಜೊತೆಗೂಡಿ ಅನೇಕ ಕಾರ್ಯಕ್ರಮ ಹಮ್ಮಿಕೊಳ್ಳಲು ತಾಲೂಕು ಪಂಚಾಯಿತಿಯೂ ಹಲವು ಯೋಜನೆ ರೂಪಿಸುತ್ತಿದೆ ಎಂದು ತಿಳಿಸಿದರು.

---

### 7ನೇ ಸುತ್ತಿನ ರಾಷ್ಟ್ರೀಯ ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮದ ಪೂರ್ವಭಾವಿ ಸಭೆ

# ಲಸಿಕಾ ಅಭಿಯಾನ ಯಶಸ್ವಿಗೊಳಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ ಜಿಲ್ಲೆಯಲ್ಲಿ ಎಪ್ರಿಲ್ 21ರಿಂದ ಜೂನ್ 4ರವರೆಗೆ 7ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನ ನಡೆಯಲಿದ್ದು, ಅಭಿಯಾನದ ಯಶಸ್ಸಿಗೆ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯೊಂದಿಗೆ ವಿವಿಧ ಇಲಾಖೆಯ ಅಧಿಕಾರಿಗಳ ಸಹಕಾರ ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 7ನೇ ಸುತ್ತಿನ ರಾಷ್ಟ್ರೀಯ ಕಾಲುಬಾಯಿ ರೋಗ ನಿಯಂತ್ರಣ ಕಾರ್ಯಕ್ರಮದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.




> ಜಾನುವಾರುಗಳು ದೇಶದ ಆಸ್ತಿಯಾಗಿದ್ದು, ಜಾನುವಾರುಗಳ ಸಂರಕ್ಷಣೆ ಪ್ರತಿಯೊಬ್ಬರ ಹೊಣೆಯಾಗಿದೆ. ರೈತರಿಗೆ ಆರ್ಥಿಕ ಸಂಕಷ್ಟಗಳನ್ನು ತಂದೊಡ್ಡುವ ಕಾಲುಬಾಯಿ ರೋಗವನ್ನು ನಿಯಂತ್ರಿಸಿ ನಿರ್ಮೂಲನೆ ಮಾಡಲು ಈ ರೋಗದ ವಿರುದ್ಧ ಜಾನುವಾರುಗಳಿಗೆ ಲಸಿಕೆ ಹಾಕಿಸುವುದು ಕಡ್ಡಾಯವಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಪಶುಪಾಲಕರು ಹಾಗೂ ರೈತ ಬಾಂಧವರು ತಮ್ಮ ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸುವಂತೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ. ಎಚ್. ನಾಗರಾಜ ಮಾತನಾಡಿ, ಕಾಲುಬಾಯಿ ರೋಗವು ವೈರಾಣುವಿನಿಂದ ಹರಡುವ ಸಾಂಕ್ರಾಮಿಕ ರೋಗವಾಗಿದೆ. ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಗದಗ ಜಿಲ್ಲೆಗೆ ಕಾಲುಬಾಯಿ ರೋಗ ಲಸಿಕೆಯು ಕೇಂದ್ರ ಸರ್ಕಾರದಿಂದ ಸರಬರಾಜಾಗಿದ್ದು, ಈ ರೋಗದ ವಿರುದ್ಧ ದನ, ಎಮ್ಮೆ ಮತ್ತು ಕರುಗಳಿಗೆ ಉಚಿತವಾಗಿ ಎಪ್ರಿಲ್ 21ರಿಂದ ಜೂನ್ 4ರವರೆಗೆ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಲಸಿಕೆದಾರರು ಮನೆ ಮನೆಗೆ ಭೇಟಿ ನೀಡಿ ಜಾನುವಾರುಗಳಿಗೆ ಲಸಿಕೆ ಹಾಕಲಿದ್ದಾರೆ. ಲಸಿಕಾ ಅಭಿಯಾನದಲ್ಲಿ 196 ಲಸಿಕಾ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. ಕೆಎಂಎಫ್, ನಗರಸಭೆ, ಸ್ಥಳೀಯ ಸಂಸ್ಥೆಗಳ ಸಹಕಾರದೊಂದಿಗೆ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ ಎಂದು ಸಭೆಗೆ ವಿವರಿಸಿದರು.

ಇದೇ ಸಂದರ್ಭದಲ್ಲಿ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯಿಂದ 7ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನದ ಕುರಿತು ಭಿತ್ತಿಪತ್ರವನ್ನು ಬಿಡುಗಡೆಗೊಳಿಸಲಾಯಿತು. ಸಭೆಯಲ್ಲಿ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಸಹಾಯಕ ನಿರ್ದೇಶಕರು, ವಿವಿಧ ಇಲಾಖೆಯ ಅಧಿಕಾರಿಗಳು, ಜಿಲ್ಲಾ ಜಾನುವಾರು ರೋಗಗಳ ಲಸಿಕಾ ನಿರ್ವಹಣಾ ಸಮಿತಿ ಸದಸ್ಯರು ಹಾಜರಿದ್ದರು.

---

# ಭೀಮ ಬಂಧುಗಳಿಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ನಾಡು-ನುಡಿಗಾಗಿ ಅನುಪಮ ಸೇವೆ ಸಲ್ಲಿಸಿ ಡಾ. ಬಿ.ಆರ್. ಅಂಬೇಡ್ಕರ್ ಪ್ರಶಸ್ತಿಗೆ ಭಾಜನರಾದ ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷ ಹನುಮಂತಪ್ಪ ಅಬ್ಬಿಗೇರಿ, ಧನ್ಯ ಫೌಂಡೇಶನ್‌ನ ಸಂಸ್ಥಾಪಕ ಅಧ್ಯಕ್ಷ ರಮೇಶ್ ಚಲವಾದಿ ಹಾಗೂ ಗದಗ ಜಿಲ್ಲಾ ಕಟ್ಟಡ ನಿರ್ಮಾಣ ಕಾರ್ಮಿಕರ ಮಹಾಸಂಘ ರಚಿಸಿ ಸೇವೆ ಸಲ್ಲಿಸುತ್ತಿರುವ ಅಧ್ಯಕ್ಷ ಮೆಹಬೂಬ್‌ಖಾನ್ ಪಠಾನ್ ಇವರೆಲ್ಲರಿಗೂ ಭೀಮ ಬಂಧುಗಳ ಪರವಾಗಿ ಯುವ ಕರ್ನಾಟಕ ಭೀಮ ಸೇನೆ ಯುವಶಕ್ತಿ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ರಾಮು ಬಾಗಲಕೋಟ್, ಶಹರ ಘಟಕದ ಅಧ್ಯಕ್ಷ ಶಬ್ಬೀರ್ ತಹಸೀಲ್ದಾರ್, ಉಪಾಧ್ಯಕ್ಷ ಖಾಜಿಸಾಬ್ ಗಬ್ಬೂರ, ಪ್ರಧಾನ ಕಾರ್ಯದರ್ಶಿ ನಾಸಿರ್ ಚಿಕೇನಕೊಪ್ಪ, ಯಂಕಪ್ಪ ತಾಳದವರ್, ನಜೀರ್ ಬಳ್ಳಾರಿ, ಖಾದರ್‌ಭಾಷಾ ನವಲಗುಂದ್, ರಫೀಕ್ ಹಣಗಿ, ಮೊಹಮ್ಮದ್‌ರಫೀಕ್ ಹಣಗಿ, ಶಾಬುದ್ದೀನ್ ಧಾರವಾಡ, ಮಂಜುನಾಥ್ ಹೂವಿನಹಳ್ಳಿ, ಸಾಧಿಕ್ ಅರಗಂಜಿ, ಮುನ್ನಾ ಹರ್ಲಾಪುರ್, ರಶೀದ್ ನಾಗರದಿನ್ನಿ, ಇದರಿಸ ಮುಲ್ಲಾ, ಮೆಹಬೂಬ್ ಬೆಟಗೇರಿ, ರೆಹಮಾನ್‌ಸಾಬ್ ಕಳಸಾಪುರ್, ಮುನ್ನಾ ಮುಳಗುಂದ, ರಾಘು ಪತ್ತಾರ್, ಝುಬಿವುಲ್ಲಾ ಬೊದ್ಲೆಖಾನ್, ಆನಂದ್ ಗಡ್ಡದವರ, ದುರ್ಗೇಶ್ ಕಿನ್ನರಿ, ಹುಸೇನ್‌ಸಾಬ್ ಬೆಳಗಟ್ಟಿ, ಇಸ್ಮಾಯಿಲ್ ಶಿರ್ವಾರ್, ತೌಸಿಫ್ ಗೋಗೇರಿ, ಮೊಹಮ್ಮದ್‌ರಫೀಕ್ ಕರೆಕಾಯಿ, ಫಾರೂಕ್ ಶಿರಹಟ್ಟಿ, ಚೇತನ್‌ಸಿಂಗ್ ತಾಳಿಕೋಟಿ, ಅಬ್ಬು ವನಂಬಡಿ ಸೇರಿದಂತೆ ಮುಂತಾದವರಿದ್ದರು.

---

# ಇಷ್ಟಲಿಂಗ ಪೂಜೆಯಿಂದ ಜನ್ಮ ಸಾರ್ಥಕ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಲಿಂಗದೀಕ್ಷೆಯು ಭಗವಂತನನ್ನು ಸಾಕ್ಷಾತ್ಕಾರಪಡಿಸಿಕೊಳ್ಳುವ ಚೈತನ್ಯ ಶಕ್ತಿಸಾಧನವಾಗಿದೆ. ಶ್ರೀಗುರುವಿನಿಂದ ಶಿವದೀಕ್ಷಾ ಸಂಪನ್ನರಾಗಿ ಇಷ್ಟಲಿಂಗ ಪಡೆದು ಪೂಜಿಸಿದರೆ ಮಾನವ ಜನ್ಮ ಸಾರ್ಥಕವಾಗುತ್ತದೆ ಎಂದು ಹಿರೂರದ ಗುಬ್ಬಿ ನಂಜುಡೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಅವರು ಶುಕ್ರವಾರ ತಾಲೂಕಿನ ಬಾಲೇಹೊಸುರು ಗ್ರಾಮದ ಶ್ರೀ ದಿಂಗಾಲೇಶ್ವರ ಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಜಂಗಮ ವಟುಗಳಿಗೆ ಅಯ್ಯಾಚಾರ-ಲಿಂಗದೀಕ್ಷೆ ನೆರವೇರಿಸಿ ಆಶೀರ್ವಚನ ನೀಡಿ ಮಾತನಾಡಿದರು.

ವೀರಶೈವ ಧರ್ಮದಲ್ಲಿ ಗುರು-ಲಿಂಗ-ಜಂಗಮಕ್ಕೆ ವಿಶಿಷ್ಠ ಸ್ಥಾನಮಾನವಿದೆ. ಲಿಂಗಧಾರಣೆ, ಶಿವಪೂಜೆಯಿಂದ ಆತ್ಮಬಲ ಹೆಚ್ಚುತ್ತದೆ. ಸಮಾಜದಲ್ಲಿನ ಧಾರ್ಮಿಕ ಕಾರ್ಯಗಳಲ್ಲಿ ಪಾಲ್ಗೊಳ್ಳುವ ಹಕ್ಕು ಪ್ರಾಪ್ತವಾಗುತ್ತದೆ. ವಿಭೂತಿ, ಲಿಂಗ, ಜೋಳಿಗೆ, ದಂಡ ಇವು ಸಂಸ್ಕಾರದ ಸಂಕೇತಗಳಾಗಿವೆ. ವೀರಶೈವ ಲಿಂಗಾಯತ ಸಮಾಜದವರೆಲ್ಲರೂ ನಿತ್ಯ 'ಓಂ ನಮಃ ಶಿವಾಯ' ಶ್ರೇಷ್ಠ ಮಂತ್ರ ಪಠಣ ಮಾಡಬೇಕು. ಲಿಂಗದೀಕ್ಷೆ ಪಡೆದವರು ಸಮಾಜದಲ್ಲಿ ನಿತ್ಯ ಶಿವಪೂಜೆ ಮಾಡಿ ಧಾರ್ಮಿಕ ಚಟುವಟಿಕೆಗಳಲ್ಲಿ ಸಕ್ರೀಯವಾಗಿ ಪಾಲ್ಗೊಂಡು ಧರ್ಮ ಸಂರಕ್ಷಣೆಗೆ ಮುಂದಾಗಬೇಕು. ದುಶ್ಚಟಗಳನ್ನು ಬಿಟ್ಟು ಒಳ್ಳೆಯ ವಿದ್ಯಾಭ್ಯಾಸ ಪಡೆದು ನಾಡಿಗೆ ಒಳ್ಳೆಯ ನಾಗರಿಕರಾಗಲು ಈ ಲಿಂಗದೀಕ್ಷೆ ಅಯ್ಯಾಚಾರ ಸೂಕ್ತ ಮಾರ್ಗದರ್ಶನ ಮಾಡುತ್ತದೆ ಎಂದು ನುಡಿದರು.

ದಿಂಗಾಲೇಶ್ವರ ಮಠದ ಪಟ್ಟಾಧ್ಯಕ್ಷರು ಹಾಗೂ ಶಿರಹಟ್ಟಿ ಶ್ರೀ ಫಕೀರೇಶ್ವರ ಸಂಸ್ಥಾನ ಮಠದ ಉತ್ತರಾಧಿಕಾರಿಗಳೂ ಆಗಿರುವ ಜ.ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಬೆಳಿಗ್ಗೆ ಷಟಸ್ಥಲ ದ್ವಜಾರೋಹಣ ನೆರವೇರಿಸಿ ಜಾತ್ರಾ ಮಹೋತ್ಸವ ಕಾರ್ಯಕ್ರಮಗಳಿಗೆ ಚಾಲನೆ ನೀಡಿದರು. ಹಲವು ಗ್ರಾಮಗಳ ಭಕ್ತರು ಆಗಮಿಸಿದ್ದರು. 50ಕ್ಕೂ ಹೆಚ್ಚು ಜಂಗಮ ವಟುಗಳಿಗೆ ಲಿಂಗದೀಕ್ಷೆ ಕಾರ್ಯ ನೆರವೇರಿಸಲಾಯಿತು.


---

### ಸಮಾನತೆ ಮಂದಿರ ನಿರ್ಮಾಣದ ನಿಮಿತ್ತ ದಾರ್ಶನಿಕರ ಮೂರ್ತಿಗಳ ಮೆರವಣಿಗೆ: ರವಿಕಾಂತ ಅಂಗಡಿ

# 'ಬಸವ ಬುತ್ತಿ' ಕಾರ್ಯಕ್ರಮ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಅಂಬೇಡ್ಕರ್ ಜಯಂತ್ಯುತ್ಸವದ ಅಂಗವಾಗಿ ಕಳೆದ ವರ್ಷ ಜಿಲ್ಲೆಯಲ್ಲಿ ವಿವಿಧ ಕಾರ್ಯಕ್ರಮಗಳು ನಡೆದವು. ಇದೇ ಶ್ರೇಣಿಯಲ್ಲಿ, ಸಮಾನತೆ ಮೌಲ್ಯಗಳನ್ನು ಪ್ರತಿಪಾದಿಸುವ 'ಸಮಾನತೆ ಮಂದಿರ'ವನ್ನು ಕುರ್ತಕೋಟಿ ಗ್ರಾಮದಲ್ಲಿ ನಿರ್ಮಿಸಲು ಯೋಜನೆ ರೂಪಿಸಲಾಗಿದೆ. ಇದನ್ನೊಳಗೊಂಡು ಎಪ್ರಿಲ್ 19ರ ಮಧ್ಯಾಹ್ನ 3 ಗಂಟೆಗೆ ಗದಗ ನಗರದ ಸ್ವಾಮಿ ವಿವೇಕಾನಂದ ಭವನದಲ್ಲಿ 'ಬಸವ ಬುತ್ತಿ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಮಾನತೆ ಪ್ರತಿಷ್ಠಾನದ ಸದಸ್ಯ ರವಿಕಾಂತ ಅಂಗಡಿ ತಿಳಿಸಿದರು.




ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಕಾರ್ಯಕ್ರಮವು 'ಸಮಾನತೆ ಯಾತ್ರೆ' ನಿಮಿತ್ತ ನಡೆಯಲಿದೆ. ಹಿಂದೆ ಮಳೆಯ ಕಾರಣದಿಂದ ಮುನ್ಸಿಪಲ್ ಮೈದಾನದಲ್ಲಿ ನಿಗದಿಯಾಗಿದ್ದ ಸ್ಥಳ ಬದಲಾಗಿದ್ದು, ಕಾರ್ಯಕ್ರಮ ಇದೀಗ ಸ್ವಾಮಿ ವಿವೇಕಾನಂದ ಭವನದಲ್ಲಿ ನಡೆಯಲಿದೆ. ಕಾರ್ಯಕ್ರಮದ ಅಂಗವಾಗಿ ಏಳು ದಾರ್ಶನಿಕರ ಮೂರ್ತಿಗಳ ಮೆರವಣಿಗೆ ಆಯೋಜಿಸಲಾಗಿದೆ.

> **ರಾಜಕೀಯೇತರ ಕಾರ್ಯಕ್ರಮ**
>
> ಡಾ. ಡಿ.ಆರ್. ಪಾಟೀಲ ಮತ್ತು ಅನಿಲ ಮೆಣಸಿನಕಾಯಿ ಭೇಟಿಯಾದ ಫೋಟೋಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ಕೆಲವರು ಇದನ್ನು ರಾಜಕೀಯ ಅರ್ಥದಲ್ಲಿ ಬಿಂಬಿಸುತ್ತಿದ್ದಾರೆ. ಆದರೆ ಈ ಭೇಟಿಯು ಸಂಪೂರ್ಣ ಅಪರಿಚಿತ ಸನ್ನಿವೇಶದಲ್ಲಿ ನಡೆದಿದೆ. ಸಮಾನತೆ ಜಾತ್ರೆ ರಾಜಕೀಯೇತರ ಕಾರ್ಯಕ್ರಮವಾಗಿದ್ದು, ಯಾವುದೇ ಪಕ್ಷದ ಪ್ರಚಾರಕ್ಕೆ ಸಂಬಂಧಿಸಿದಂತೆ ಬಿಂಬಿಸಬಾರದು. ಸಂಘಟನೆ ಬೇರೆ, ಕಾರ್ಯಕ್ರಮ ಬೇರೆ. ಅನಿಲ ಮೆಣಸಿನಕಾಯಿ ಕೂಡಾ ಯಾವುದೇ ಚುನಾವಣಾ ರಾಜಕೀಯ ಮಾಡುತ್ತಿಲ್ಲ ಎಂಬುದನ್ನು ಸ್ಪಷ್ಟಪಡಿಸಿದ್ದಾರೆ. ಅವರು ಬಿಜೆಪಿಯಲ್ಲೇ ಇದ್ದು, ಪಕ್ಷದ ಕಾರ್ಯಕರ್ತರಿಗೆ ಮಾತ್ರ ಬೆಂಬಲ ನೀಡಲಿದ್ದಾರೆ.
>
> **– ರವಿಕಾಂತ ಅಂಗಡಿ.**

ಕಾರ್ಯಕ್ರಮಕ್ಕೆ ಶಾಸಕ ಸಿ.ಸಿ. ಪಾಟೀಲ, ಮಾಜಿ ಸಚಿವ ಶ್ರೀರಾಮುಲು ಹಾಗೂ ಮಾಜಿ ಶಾಸಕ ಡಿ.ಆರ್. ಪಾಟೀಲ ಸೇರಿದಂತೆ ಹಲವರಿಗೆ ಆಹ್ವಾನ ನೀಡಲಾಗಿದೆ ಎಂದರು.

ಮೆರವಣಿಗೆಯು ಬಸವೇಶ್ವರ ಸರ್ಕಲ್ ಹುಯಿಲಗೋಳ ವೃತ್ತ ಗಾಂಧಿ ವೃತ್ತ ರೋಟರಿ ಸರ್ಕಲ್ ಪಂಡಿತ ಪುಟ್ಟರಾಜ ಗವಾಯಿಗಳ ಸರ್ಕಲ್ ಮಾರ್ಗವಾಗಿ ವಿವೇಕಾನಂದ ಭವನದವರೆಗೆ ಸಾಗಲಿದೆ ಎಂದು ರವಿಕಾಂತ ಅಂಗಡಿ ತಿಳಿಸಿದರು.

ಈ ವೇಳೆ ಉಡಚಪ್ಪ ಹಳ್ಳಿಕೇರಿ, ಅಯ್ಯಪ್ಪ ಅಂಗಡಿ, ಶರಣು ಚಿಂಚಲಿ, ಪರಮೇಶ ಲಮಾಣಿ ಮುಂತಾದವರು ಉಪಸ್ಥಿತರಿದ್ದರು.

---

# ಮನುಸ್ಮೃತಿಯ ಜಾತಿ ವಿಷದ ಕಾರಣಕ್ಕೇ ಮಡಿವಾಳ ಸಮಾಜ ಹಿಂದುಳಿದಿದೆ: ಸಿಎಂ ಸಿದ್ದರಾಮಯ್ಯ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಮಡಿವಾಳ ಸಮುದಾಯದ ಪ್ರಗತಿಗೆ ಸರ್ಕಾರ ಬದ್ಧವಾಗಿದೆ. ಮುಖ್ಯವಾಹಿನಿಗೆ ಬರುವ ಪ್ರಯತ್ನ ನಿಮ್ಮಿಂದ ಹೆಚ್ಚೆಚ್ಚು ಆಗಬೇಕು. ಈ ಕಾರಣಕ್ಕೇ ವಿದ್ಯಾಸಿರಿ ಯೋಜನೆಯ ಮೊತ್ತವನ್ನು ಎರಡು ಸಾವಿರ ರೂಪಾಯಿಗೆ ಹೆಚ್ಚಳ ಮಾಡುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ ಮಾಡಿದರು.

ಬೆಂಗಳೂರಿನ ಕೆಂಗೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ 'ಕಲಿದೇವ ಕನ್ವೆನ್ಷನ್ ಹಾಲ್' ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.



ಮಡಿವಾಳ ಮತ್ತು ಹಿಂದುಳಿದ ಸಮುದಾಯದ ಮಕ್ಕಳು ಶಿಕ್ಷಣವಂತರಾಗಬೇಕು. ಇದಕ್ಕೇ ವಿದ್ಯಾಸಿರಿ ಮೊತ್ತವನ್ನು ಪ್ರತಿ ವಿದ್ಯಾರ್ಥಿಗೆ ಒಂದೂವರೆ ಸಾವಿರದಿಂದ ಎರಡು ಸಾವಿರ ರೂಪಾಯಿಗೆ ಹೆಚ್ಚಿಸಲಾಗುವುದು ಎಂದು ಹೇಳಿದರು.

12ನೇ ಶತಮಾನದಲ್ಲೇ ಮಡಿವಾಳ ಮಾಚಿ ದೇವರು ಬಸವಣ್ಣನವರ ಜೊತೆ ಸೇರಿ ಸಮಾಜದ ಬದಲಾವಣೆಗೆ ಮುಂದಾಗಿದ್ದರು. ನಮ್ಮ ಸಮಾಜದಲ್ಲಿ ಜಾತಿ ವ್ಯವಸ್ಥೆ ಕಾರಣಕ್ಕೆ ಅಸಮಾನತೆ ಇದೆ. ಈ ಕಾರಣಕ್ಕೆ ಉದ್ಯೋಗ, ಶಿಕ್ಷಣ ಸಿಗದೆ ಆರ್ಥಿಕ ಅಸಮಾನತೆ ಹೆಚ್ಚಾಯಿತು ಎಂದು ವಿವರಿಸಿದ್ದರು ಬಸವಾದಿ ಶರಣರು ಜಾತಿಮುಕ್ತ ಮನುಷ್ಯ ಸಮಾಜ ನಿರ್ಮಾಣಕ್ಕೆ ಹೋರಾಡಿದ್ದರು. ಒಟ್ಟಿಗೆ ಕುಳಿತು ಊಟ ಮಾಡಲಾಗದ ಅನಿಷ್ಠ ಪದ್ಧತಿ ವಿರುದ್ಧ ಧ್ವನಿ ಎತ್ತಿ ಜಾತಿ ಅಸಮಾನತೆ ಅಳಿಸಲು ಶ್ರಮಿಸಿದ್ದರು. ಎಲ್ಲಾ ಜಾತಿ, ಸಮುದಾಯಗಳ ಜಾತ್ಯತೀತ ಪ್ರತಿನಿಧಿಗಳನ್ನೊಳಗೊಂಡ ಅನುಭವ ಮಂಟಪದ ಉದ್ದೇಶವೇ ಜಾತಿ ಮುಕ್ತ ಸಮಾಜದ ನಿರ್ಮಾಣವಾಗಿತ್ತು ಎಂದರು.

---

## ನಿಧನ

**ಈರಪ್ಪ ಕುಷ್ಟಗಿ**




ಗದಗ : ಕನ್ನಡಪ್ರಭ ಜಿಲ್ಲಾ ವರದಿಗಾರ ಶಿವಕುಮಾರ ಕುಷ್ಟಗಿ ಅವರ ತಂದೆ ವಿಶ್ರಾಂತ ಶಿಕ್ಷಕರಾದ ಈರಪ್ಪ ಕಳಕಪ್ಪ ಕುಷ್ಟಗಿ (83) ಅವರು ಶುಕ್ರವಾರ ಮಧ್ಯಾಹ್ನ 2 ಗಂಟೆಗೆ ಗದಗನಲ್ಲಿ ನಿಧನರಾದರು. ಮೃತರಿಗೆ ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ ಹಾಗೂ ಅಳಿಯಂದಿರು, ಸೊಸೆಯಂದಿರು, ಮೊಮ್ಮಕ್ಕಳು, ಮರಿ ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧುಗಳು ಇದ್ದಾರೆ. ಮೃತರ ಅಂತ್ಯಕ್ರಿಯೆ ಶುಕ್ರವಾರ ರಾತ್ರಿ ಜರುಗಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka